ಸಂಪುಟ : 4 ಸಂಚಿಕೆ : 06 ಪುಟ : 4 ಬೆಲೆ : ರೂ. 4 ರವಿವಾರ, ಫೆಬ್ರುವರಿ, 12, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 06 Pages : 4 Rate : 4 Rs Tuesday, February 14, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಏರೋ ಇಂಡಿಯಾ ನವ ಭಾರತದ ಶಕ್ತಿಯನ್ನು ತೋರಿಸುತ್ತಿದ್ದು; ನಮ್ಮ ಆತ್ಮವಿಶ್ವಾಸ ಹೆಚ್ಚಿಸಿದೆ: ಪ್ರಧಾನಿ ಮೋದಿ

ಬೆಂಗಳೂರು: ಏರೋ ಇಂಡಿಯಾ ಶೋ ನವ ಭಾರತದ ಶಕ್ತಿಯನ್ನು ತೋರಿಸುತ್ತಿದ್ದು, ಇದು ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಸೋಮವಾರ ಹೇಳಿದ್ದಾರೆ.

ಬೆಂಗಳೂರು ಹೊರವಲಯದಲ್ಲಿರುವ ಯಲಹಂಕ ವಾಯುನೆಲೆಯಲ್ಲಿ ಏರೋ ಇಂಡಿಯಾ ವೈಮಾನಿಕ ಪ್ರದರ್ಶನದ 14ನೇ ಆವೃತ್ತಿಗೆ ಚಾಲನೆ ನೀಡಿದ ಬಳಿಕ ದೇಶದ ಜನತೆಯನ್ನುದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಭಾಷಣ ಮಾಡಿದರು.

ನವಭಾರತದ ಸಾಮರ್ಥ್ಯಕ್ಕೆ ಬೆಂಗಳೂರಿನ ಆಗಸ ಸಾಕ್ಷಿಯಾಗುತ್ತಿದೆ. ಹೊಸ ಎತ್ತರವೇ ನವ ಭಾರತದ ಸತ್ಯ ಎಂಬುದಕ್ಕೆ ಬೆಂಗಳೂರಿನ ಆಕಾಶವೇ ಸಾಕ್ಷಿಯಾಗಿದೆ. ಇಂದು, ರಾಷ್ಟ್ರವು ಹೊಸ ಎತ್ತರವನ್ನು ತಲುಪುತ್ತಿದೆ ಎಂದು ಹೇಳಿದರು.

ಏರೋ ಇಂಡಿಯಾವನ್ನು ಒಂದು ಸಮಯದಲ್ಲಿ ಕೇವಲ ಪ್ರದರ್ಶನಕ್ಕೆ ಸೀಮಿತ ಎಂದು ಭಾವಿಸಲಾಗುತ್ತಿತ್ತು. ಕಳೆದ ಕೆಲ ವರ್ಷಗಳಿಂದ ದೃಷ್ಟಿಕೋನ ಬದಲಾಗಿದೆ. ನವಭಾರತದ ನವಮಾರ್ಗವನ್ನು ಏರೋ ಇಂಡಿಯಾ ಪ್ರತಿಫಲಿಸುತ್ತದೆ. ಇವತ್ತು ಇದು ಕೇವಲ ಶೋ ಮಾತ್ರವಲ್ಲ ಭಾರತದ ಶಕ್ತಿಯೂ ಆಗಿದೆ. ಭಾರತದ ರಕ್ಷಣಾ ಉದ್ಯಮದ ಬೆಳವಣಿಗೆ ಮತ್ತು ಆತ್ಮವಿಶ್ವಾಸಕ್ಕೆ ಪ್ರತೀಕವಾಗಿದೆ ಎಂದು ತಿಳಿಸಿದರು.

21ನೇ ಶತಮಾನದ ನವಭಾರತವು ಯಾವುದೇ ಅವಕಾಶ ಕಳೆದುಕೊಳ್ಳಲು ಇಷ್ಟಪಡುವುದಿಲ್ಲ. ಕಠಿಣ ಪರಿಶ್ರಮ ಹಾಕಲೂ ಹಿಂದೆಮುಂದೆ ನೋಡುವುದಿಲ್ಲ. ಭಾರತದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲೂ ಕ್ರಾಂತಿ ತರುತ್ತಿದ್ದೇವೆ. ರಕ್ಷಣಾ ಕ್ಷೇತ್ರ ಇಂದು ಅತ್ಯಂತ ಪ್ರಬಲ ವಲಯವಾಗಿ ಬೆಳೆದಿದೆ ಎಂದು ಅವರು ಹೇಳಿದರು.

ಭಾರತವು ಈಗ ಆಮದು ಮಾಡುವುದಿಲ್ಲ.



ಈಗ ರಫ್ತು ಮಾಡುತ್ತಿದೆ. ನಾವು ಸಾಕಷ್ಟು ಯಶಸ್ಸು ಸಾಧಿಸುತ್ತಿದ್ದೇವೆ. ರಕ್ಷಣಾ ಕ್ಷೇತ್ರದಲ್ಲಿ ತಂತ್ರಜ್ಞಾನ ಯಾರದ್ದು ಇದೆಯೋ ಅವರದ್ದೇ ಮೇಲುಗೇ ಇರುತ್ತದೆ. ಭಾರತದಲ್ಲಿ 8–9 ವರ್ಷದಲ್ಲಿ ರಕ್ಷಣಾ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳಾಗಿವೆ. ಭಾರತವು 2025ರ ಹೊತ್ತಿಗೆ ರಫ್ತು ಪ್ರಮಾಣವನ್ನು 5 ಬಿಲಿಯನ್ ಡಾಲರ್‌ಗೆ ತೆಗೆದುಕೊಂಡು ಹೋಗಲಿದೆ.

ಭಾರತವು ಲಾಂಚ್ ಪ್ಯಾಡ್ ತರಹ ಕೆಲಸ ಮಾಡಲಿದೆ. ಭಾರತವು ಡಿಫೆನ್ಸ್ ಮ್ಯಾನುಫ್ಯಾಕ್ಚರಿಂಗ್ ಕ್ಷೇತ್ರದಲ್ಲಿ ಅಗ್ರಸ್ಥಾನವನ್ನು ಪಡೆದುಕೊಳ್ಳಲಿದೆ. ಭಾರತವು ಸರ್ಕಾರವು ಆಹ್ವಾನ ನೀಡುತ್ತಿದೆ. ಖಾಸಗಿ ಕಂಪನಿಗಳು ಭಾರತೀಯ ರಕ್ಷಣಾ ಕ್ಷೇತ್ರದಲ್ಲಿ ಹೂಡಿಕೆ ಮಾಡಬೇಕು. ಆ ಮೂಲಕ ಭಾರತವನ್ನು ರಕ್ಷಣಾ ಕ್ಷೇತ್ರದಲ್ಲಿ ಜಗತ್ತಿನ ಬಲಾಢ್ಯ ರಾಷ್ಟ್ರವಾಗಿ ರೂಪಿಸಬೇಕು ಎಂದರು.

ಅಮೃತ್ ಕಾಲದಲ್ಲಿ ಭಾರತವು ಪೈಲಟ್ ತರಹ ಮುಂದೆ ಹೋಗುತ್ತಿದೆ. ಇಂದಿನ ಭಾರತವು ವೇಗವಾಗಿ, ದೂರದ ಬಗ್ಗೆ ಯೋಚಿಸುತ್ತದೆ, ತ್ವರಿತವಾಗಿ ನಿರ್ಧರಿಸುತ್ತದೆ. ಭಾರತದ ವೇಗ ಎಷ್ಟೇ ವೇಗವಾಗಿರಲಿ, ಎಷ್ಟೇ ಎತ್ತರಕ್ಕೆ ಏರಲಿ. ಯಾವಾಗಲೂ ತನ್ನ ಬೇರುಗಳಿಗೆ ಅಂಟಿಕೊಂಡಿರುತ್ತದೆ. ಇದನ್ನೇ ನಮ್ಮ ಪೈಲಟ್ ಕೂಡ ಮಾಡುತ್ತಾರೆ. ಭಾರತದಲ್ಲಿ ಎಲ್ಲ ಕ್ಷೇತ್ರಗಳಲ್ಲಿ ಹೂಡಿಕೆಯಾಗುತ್ತಿದೆ. ಎಲ್ಲದಕ್ಕೂ ಬೆಂಬಲ ನೀಡುತ್ತದೆ. ಭಾರತದಲ್ಲಿನ ಸುಧಾರಣೆಗಳಿಂದ ಇಡೀ ಜಗತ್ತಿನ ಮೇಲೆ ಪರಿಣಾಮ ಬೀರುತ್ತಿದೆ.

ಭಾರತದಲ್ಲಿ ರಕ್ಷಣಾ ಕ್ಷೇತ್ರದಲ್ಲಿ ವಿದೇಶಿ ಹೂಡಿಕೆಗೆ ನಿಯಮಗಳನ್ನು ಸರಳಗೊಳಿಸಲಾಗಿದೆ. ಉದ್ಯೋಗ ಪ್ರಕ್ರಿಯೆ ಸರಳಗೊಳಿಸಲಾಗಿದೆ. ವ್ಯಾಲಿಡಿಟಿ ಹೆಚ್ಚಿಸಲಾಗಿದೆ. ಬಜೆಟ್‌ನಲ್ಲಿ ತೆರಿಗೆಯನ್ನ ಕಡಿಮೆ ಮಾಡಲಾಗಿದೆ. ಇದರ ಲಾಭ ಪಡೆದುಕೊಳ್ಳಬೇಕು. ಭಾರತದಲ್ಲಿ ರಕ್ಷಣಾ ಸೆಕ್ಟರ್ ಬಲಗೊಳಿಸುವ ಪ್ರಯತ್ನ ಮುಂದೆಯು ನಡೆಯಲಿದೆ.

ನಾವೆಲ್ಲ ಜತೆಗೂಡಿ ಮುಂದೆ ಹೋಗಬೇಕಾಗಿದೆ. ಮುಂದೆಯೂ ಭವ್ಯ ಏರೋ ಇಂಡಿಯಾ ಆಯೋಜಿಸುವ ಆಶಾ ಭಾವನೆಯನ್ನು ವ್ಯಕ್ತಪಡಿಸುತ್ತೇನೆ ಎಂದು ತಿಳಿಸಿದರು.

ಟೆಜೊರಿ ಕಪ್ಪಾಟ್ಟ್ ರಿಪೇರಿ ಪೆಂಟಿಂಗ್ ಆಲ್ ಟೈಪ್ ಆಫ್ ಪಾಬ್ರಿಕೇಷನ್ ವರ್ಕ್ ಶಾಪುರ್ ಬೆಳಗಾವಿ ಸಂಪರ್ಕಿಸಿ:7349155671

Teesri kapat repair and painting all type of fabrication work corporation complex shapur Belagavi hare Krishna contact 7349 155671

## ಗೃಹಜ್ಯೋತಿ, ಗೃಹಲಕ್ಷ್ಮಿ ಯೋಜನೆ ಘೋಷಣೆ: ಫೆ.16ರಿಂದ ಮನೆ ಮನೆಗೆ ತೆರಳಿ 'ಗ್ಯಾರಂಟಿ ಕಾರ್ಡ್' ನೀಡಲು ಕಾಂಗ್ರೆಸ್ ಸಜ್ಜು



ಬೆಂಗಳೂರು: ರಾಜ್ಯದಲ್ಲಿ ವಿಧಾನಸಭಾ ಚುನಾವಣೆ ಹತ್ತಿರ ಬರುತ್ತಿದ್ದು, ಚುನಾವಣೆಗೆ ಭರ್ಜರಿ ಸಿದ್ಧತೆ ನಡೆಸಿರುವ ಕಾಂಗ್ರೆಸ್ ನಾಯಕರು ಅಬ್ಬರ ಪ್ರಚಾರ ನಡೆಸುತ್ತಿದ್ದಾರೆ. ಈಗಾಗಲೇ ಗೃಹ ಜ್ಯೋತಿ, ಗೃಹಲಕ್ಷ್ಮೀ ಯೋಜನೆಗಳನ್ನು ಘೋಷಣೆ ಮಾಡಿರುವ ಕಾಂಗ್ರೆಸ್, ಇದೀಗ ಮನೆ ಮನೆ ತೆರಳಿ ಗ್ಯಾರಂಟಿ ಕಾರ್ಡ್ ನೀಡಲು ಮುಂದಾಗಿದೆ ಎಂದು ತಿಳಿದುಬಂದಿದೆ.

ಫೆ.16ರಿಂದ ಜನರ ಮನೆ ಮನೆಗೆ ತೆರಳಲಿರುವ ರಾಜ್ಯ ಕಾಂಗ್ರೆಸ್ ನಾಯಕರು, ಈ ವೇಳೆ ಗ್ಯಾರಂಟಿ ಕಾರ್ಡ್ ಗಳನ್ನು ವಿತರಿಸಲು ನಿರ್ಧರಿಸಿದ್ದಾರೆಂದು ವರದಿಗಳಿಂದ ತಿಳಿದುಬಂದಿದೆ.

ಅಬ್ಬರ ಪ್ರಚಾರಕ್ಕೆ ಮುಂದಾಗಿರುವ ಕಾಂಗ್ರೆಸ್ ತನ್ನ ಎಲ್ಲಾ ಮುಖಂಡರು ಮತ್ತು ಕಾರ್ಯಕರ್ತರನ್ನು ಪ್ರಚಾರಕ್ಕಾಗಿ ಇಳಿಸಲು ಮುಂದಾಗಿದ್ದು, ಎಲ್ಲಾ ಮನೆಗಳಿಗೂ ಗ್ಯಾಂಟಿ ಕಾರ್ಡ್ ವಿತರಿಸುವ ಕಾರ್ಯವನ್ನು ಮಾರ್ಚ್ 10 ರೊಳಗೆ ಪೂರ್ಣಗೊಳಿಸಲುವ ಗುರಿಯನ್ನಿಟ್ಟುಕೊಂಡಿದೆ ಎಂದು ವರದಿಗಳು ತಿಳಿಸಿವೆ.

ಕಾಂಗ್ರೆಸ್ ಪಕ್ಷ ಈಗಾಗಲೇ ಎರಡು ಐತಿಹಾಸಿಕ ಗ್ಯಾರಂಟಿ ಯೋಜನೆ ಘೋಷಿಸಿದ್ದು, ಗೃಹಜ್ಯೋತಿ ಯೋಜನೆ ಮೂಲಕ 200 ಯುನಿಟ್ ವಿದ್ಯುತ್ ಉಚಿತ, ಗೃಹಲಕ್ಷ್ಮಿ ಯೋಜನೆ ಮೂಲಕ ಪ್ರತಿ ಮನೆ ಯಜಮಾನಿಗೆ 2000 ರೂ. ಪ್ರತಿ ತಿಂಗಳು ಕೊಡುವುದಾಗಿ ಘೋಷಿಸಿದೆ.

## ವಿಧಾನ ಸೌಧ, ವಿಕಾಸ ಸೌಧ ಸುರಕ್ಷತೆಗೆ ವಿಶೇಷ ಕ್ರಮ: ಗೃಹ ಸಚಿವ ಆರಗ ಜ್ಞಾನೇಂದ್ರ



ಬೆಂಗಳೂರು: ರಾಜ್ಯದ ಶಕ್ತಿಕೇಂದ್ರ ಕಟ್ಟಡಗಳಾದ ವಿಧಾನ ಸೌಧ ಹಾಗೂ ವಿಕಾಸ ಸೌಧಕ್ಕೆ ಆಗಮಿಸುವವರ ಬಗ್ಗೆ ಇಪ್ಪತ್ನಾಲ್ಕು ಗಂಟೆಗಳ ಕಣ್ಗಾವಲು ಇದ್ದು, ಭದ್ರತೆ ಬಗ್ಗೆ ಯಾವುದೇ ರೀತಿಯ ರಾಜಿಯಿಲ್ಲ, ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ಇಂದು ವಿಧಾನ ಪರಿಷತ್ ನಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಟ್ಟಡಗಳ ಪ್ರವೇಶ ಸ್ಥಳಗಳಲ್ಲಿ ಅಳವಡಿಸಿದ ತಪಾಸಣಾ ಯಂತ್ರೋಪಕರಣಗಳು, ಬಹಳ ಹಳೆಯ ಕಾಲದವುಗಳಾಗಿದ್ದು ಅವುಗಳನ್ನು ಬದಲಾಯಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ವಿಧಾನ ಸೌಧ ಹಾಗೂ ವಿಕಾಸ ಸೌಧ ಕಟ್ಟಡಗಳಿಗೆ ಪ್ರವೇಶ ಪಡೆಯುವವರ ಬಗ್ಗೆ, ಎಲ್ಲಾ ರಕ್ಷಣಾ ಪ್ರೋಟೋಕಾಲ್ ನಿಯಮಗಳ ಪ್ರಕಾರ ತಪಾಸಣೆ ನಡೆಸಲಾಗುತ್ತಿದ್ದು, ದಿನದ 24 ಗಂಟೆಗಳ ಲ್ಲಿಯೂ ಮೂರು ಪಾಳಿಗಳಲ್ಲಿ, ಪೊಲೀಸರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದೂ ಸದನಕ್ಕೆ ತಿಳಿಸಿದರು.

ನೂತನ ತಪಾಸಣಾ ಯಂತ್ರೋಪಕರಣ ಗಳನ್ನು ಅಳವಡಿಸಲು, ಟೆಂಡರ್ ಕರೆಯಲಾಗಿದೆ ಎಂದೂ ಸಚಿವರು ತಿಳಿಸಿದರು.

## ಡಾ. ಬಿ.ಆರ್.ಅಂಬೇಡ್ಕರ್ ಕುರಿತ ಸ್ಕಿಟ್ ನಲ್ಲಿ ಅವಮಾನ: 7 ವಿದ್ಯಾರ್ಥಿಗಳ ಬಂಧನ



ಬೆಂಗಳೂರು: ನಗರದ ಜೈನ್ ವಿಶ್ವವಿದ್ಯಾಲಯದಲ್ಲಿ ಡಾ.ಬಿ ಆರ್ ಅಂಬೇಡ್ಕರ್ ಕುರಿತು ಪ್ರದರ್ಶಿಸಿದ ಕಿರುನಾಟಕ ವಿವಾದ ಸ್ವರೂಪ ಪಡೆದುಕೊಂಡಿದ್ದು, ಈ ಸಂಬಂಧ ಸಿದ್ದಾಪುರ ಪೊಲೀಸರು ಜೈನ್ ಕಾಲೇಜಿನ 7 ಮಂದಿ ವಿದ್ಯಾರ್ಥಿಗಳನ್ನು ಬಂಧನಕ್ಕೊಳಪಡಿಸಿದ್ದಾರೆಂದು ತಿಳಿದುಬಂದಿದೆ.


ಬಂಧಿತ ವಿದ್ಯಾರ್ಥಿಗಳು ಕಾಲೇಜಿನಲ್ಲಿ 5ನೇ ಸೆಮಿಸ್ಟರ್‌ನ ಬೇರೆ ಬೇರೆ ಕೋರ್ಸ್‌ನಲ್ಲಿ ವ್ಯಾಸಂಗ ಮಾಡುತ್ತಿದ್ದರೆಂದು ವರದಿಗಳು ತಿಳಿಸಿವೆ.

ದಕ್ಷಿಣ ವಿಭಾಗದ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಯಿಂದ ತಪ್ಪಿತಸ್ಥರ ವಿರುದ್ಧ ಎಫ್ಐಆರ್ ದಾಖಲಾಗಿತ್ತು. ಕಾಲೇಜಿನ ಪ್ರಾಂಶುಪಾಲರು, ಡೀನ್, ಕಾರ್ಯಕ್ರಮ ಆಯೋಜಕರು, ವಿದ್ಯಾರ್ಥಿಗಳು ಹಾಗೂ ಸ್ಕಿಟ್ ಬರಹಗಾರರ ಮೇಲೆ ಕೇಸ್ ದಾಖಲಾಗಿತ್ತು.

ಜಯನಗರ ಎಸಿಪಿ ಶ್ರೀನಿವಾಸ್ ನೇತೃತ್ವದಲ್ಲಿ ತನಿಖೆ ಆರಂಭವಾಗಿದ್ದು, ಎಸ್‌ಸಿ, ಎಸ್‌ಟಿ ಆ್ಯಕ್ಟ್ ಹಾಗೂ ಐಪಿಸಿ 153ಎ, 295ಎ, 149 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ವಿದ್ಯಾರ್ಥಿಗಳ ಸ್ಕಿಟ್ ಪ್ರದರ್ಶನದಿಂದಾಗಿ ಕಾಲೇಜಿಗೆ ಮುಜುಗರ ಎದುರಾಗಿರುವ ಹಿನ್ನೆಲೆಯಲ್ಲಿ ಜೈನ್ ಕಾಲೇಜು ಆಡಳಿತ ಮಂಡಳಿ ಅಸಮಾಧಾನಗೊಂಡಿದ್ದು, ಈಗಾಗಲೇ ಬೇಷರತ್ ಕ್ಷಮೆಯಾಚಿಸಿದೆ. ಅಲ್ಲದೆ. ವಿದ್ಯಾರ್ಥಿಗಳನ್ನು ಅಮಾನತು ಮಾಡಿದೆ ಎಂದು ತಿಳಿದುಬಂದಿದೆ. ಇದೀಗ ವಿದ್ಯಾರ್ಥಿಗಳನ್ನು ವಶಕ್ಕೆ ಪಡೆದುಕೊಂಡಿರುವ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆಂದು ಮೂಲಗಳು ತಿಳಿಸಿವೆ.

## ಎಲ್ಲ ಮಾದರಿಯ ಕ್ರಿಕೆಟ್‌ಗೆ ಇಂಗ್ಲೆಂಡ್ ಮಾಜಿ ನಾಯಕ ಇಯಾನ್ ಮಾರ್ಗನ್ ವಿದಾಯ



ಲಂಡನ್: 2019ರ ವಿಶ್ವಕಪ್ ವಿಜೇತ ಇಂಗ್ಲೆಂಡ್ ತಂಡದ ಮಾಜಿ ನಾಯಕ ಇಯಾನ್ ಮಾರ್ಗನ್, ಎಲ್ಲ ಮಾದರಿಯ ಕ್ರಿಕೆಟ್ ಗೆ ಗುಡ್ ಬೈ ಹೇಳಿದ್ದಾರೆ. 36 ವರ್ಷದ ಐರ್ಲೆಂಡ್ ಮೂಲದ ಬ್ಯಾಟ್ಸ್‌ಮನ್ ನನ್ನು ಕಳೆದ ಜೂನ್‌ನಲ್ಲಿ ಇಂಗ್ಲೆಂಡ್ ತಂಡದ ಏಕದಿನ ನಾಯಕತ್ವದಿಂದ ಕೆಳಗಿಳಸಲಾಗಿತ್ತು. ಆಗಲೇ ವಿದಾಯದ ಮಾತುಗಳನ್ನಾಡಿದ್ದರು.

126 ಏಕದಿನ ಮತ್ತು 72 ಟಿ20 ಪಂದ್ಯಗಳಲ್ಲಿ ಮಾರ್ಗನ್ ಇಂಗ್ಲೆಂಡ್ ತಂಡದ ನಾಯಕತ್ವ ವಹಿಸಿದ್ದರು. ನಾಯಕರಾಗಿ ಎರಡು ಮಾದರಿಗಳಲ್ಲಿ 118 ಗೆಲುವು ಸಾಧಿಸಿರುವುದು ಕೂಡಾ ದಾಖಲೆಯಾಗಿದೆ.

ಹೆಮ್ಮೆಯಿಂದಲೇ ಎಲ್ಲ ಮಾದರಿಯ ಕ್ರಿಕೆಟ್ ಗೆ ನಿವೃತ್ತಿ ಘೋಷಿಸುವುದಾಗಿ ಅವರು ತಿಳಿಸಿದ್ದಾರೆ.

ಅನೇಕ ಸಮಾಲೋಚನೆ ನಂತರ ಕ್ರಿಕೆಟ್ ಬಿಟ್ಟು ಹೋಗಲು ಇದುವೇ ಸೂಕ್ತ ಸಮಯ ಎಂಬುದನ್ನು ನಾನು ನಂಬುತ್ತೇನೆ. ಪ್ರತಿಯೊಂದು ಕ್ಷಣವನ್ನು ಆನಂದಿಸಿದ್ದೇನೆ. ಎಲ್ಲ ಕ್ರೀಡಾಪಟುವಿನಂತೆ ವೃತ್ತಿ ಜೀವನದಲ್ಲಿ ಅನೇಕ ಏಳು–ಬೀಳುಗಳನ್ನು ಕಂಡಿದ್ದೇನೆ. ಕುಟುಂಬ, ಸ್ನೇಹಿತರ ಸಹಕಾರ ಸದಾ ಇತ್ತು. ಈ ಸಂದರ್ಭದಲ್ಲಿ ಪತ್ನಿ, ಕುಟುಂಬ, ಸ್ನೇಹಿತರು , ಕೋಚ್, ಸಹ ಆಟಗಾರರು, ಅಭಿಮಾನಿಗಳಿಗೆ ಧನ್ಯವಾದ ಹೇಳಲು ಇಚ್ಚಿಸುತ್ತೇನೆ ಎಂದು ವಿದಾಯ ಸಂದೇಶದಲ್ಲಿ ತಿಳಿಸಿದ್ದಾರೆ.

## ಚೆಕ್ ಬೌನ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂಡಿಗೆರೆ ಬಿಜೆಪಿ ಶಾಸಕ ಎಂ.ಪಿ. ಕುಮಾರಸ್ವಾಮಿ



ಬೆಂಗಳೂರು: ಚೆಕ್ ಬೌನ್ಸ್ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಮೂಡಿಗೆರೆ ಬಿಜೆಪಿ ಶಾಸಕ ಎಂ.ಪಿ. ಕುಮಾರಸ್ವಾಮಿ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸೋಮವಾರ 4 ವರ್ಷ ಜೈಲು ಶಿಕ್ಷೆ ವಿಧಿಸಿ ತೀಪು ನೀಡಿದೆ.

ಎಂ.ಪಿ.ಕುಮಾರಸ್ವಾಮಿ ಅವರು ಹೂವಪ್ಪಗೌಡ ಎಂಬುವವರಿಂದ 1.35 ಕೋಟಿ ರೂಪಾಯಿ ಸಾಲ ಪಡೆದಿದ್ದರು. ಈ ಹಣ ಪಾವತಿ ಸಂಬಂಧ ಶಾಸಕ ಕುಮಾರಸ್ವಾಮಿ ಅವರು ಹೂವಪ್ಪಗೌಡ ಅವರಿಗೆ ನೀಡಿದ್ದ 8 ಚೆಕ್ ಗಳು ಸಹ ಬೌನ್ಸ್ ಆಗಿತ್ತು.

ಈ ಸಂಬಂಧ ಹೂವಪ್ಪಗೌಡ ಅವರು ಕುಮಾರಸ್ವಾಮಿ ವಿರುದ್ಧ ನ್ಯಾಯಾಲಯದಲ್ಲಿ 8 ಕೇಸ್ ದಾಖಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜೆ.ಪ್ರೀತ್ ಅವರು, ಆರೋಪಿ ಶಾಸಕರಿಗೆ 8 ಕೇಸ್ ಗಳಲ್ಲಿ ತಲಾ 6 ತಿಂಗಳು ಜೈಲು ಶಿಕ್ಷೆ ವಿಧಿಸಿದ್ದಾರೆ.

ಸಾಲ ಮರುಪಾವತಿ ಮಾಡದಿದ್ದಲ್ಲಿ ತಲಾ 6 ತಿಂಗಳು ಒಟ್ಟು 4 ವರ್ಷ ಜೈಲು ಶಿಕ್ಷೆ ಅನುಭವಿಸುವಂತೆ ಶಿಕ್ಷೆ ಪ್ರಕಟಿಸಲಾಗಿದೆ.

## ಏರೋ ಶೋ ಬಡತನ ನಿವಾರಿಸುವ ಕಾರ್ಯಕ್ರಮವೇ?: ಹೆಚ್.ಡಿ.ಕೆ ವ್ಯಂಗ್ಯ



ಹುಬ್ಬಳ್ಳಿ: ಏರೋ ಶೋ ಬಡತನ ನಿವಾರಿಸುವ ಕಾರ್ಯಕ್ರಮವೇ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿಯವರು ಸೋಮವಾರ ವ್ಯಂಗ್ಯವಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏರೋಶೋ ಬಡತನ ನಿವಾರಿಸುವ ಕಾರ್ಯಕ್ರಮವೇ. ಏರೋ ಶೋಗೆ ಬರುವುದರಿಂದ ಬಡತನ ನಿವಾರಣೆ ಆಗುತ್ತಾ? ಎಂದು ಪ್ರಶ್ನಿಸಿದ್ದಾರೆ,

ಇದೇ ವೇಳೆ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಸಿದ್ದರಾಮಯ್ಯ ಅಲ್ಲ ಸುಳ್ಳಿನ ರಾಮಯ್ಯ ಎಂದು ಕಿಡಿಕಾರಿದ್ದಾರೆ.

ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಸಿದ್ದರಾಮಯ್ಯ ಕಾರಣ. ಮೈತ್ರಿ ಸರ್ಕಾರ ಬಂದ 2 ತಿಂಗಳಲ್ಲೇ ಸರ್ಕಾರ ಪತನ ಬಗ್ಗೆ ಹೇಳಿದ್ದರು. ಬಿಜೆಪಿಯ ಅಕ್ರಮ ಹೊರ ತಂದಿದ್ದು ನಾನು, ಸಿದ್ದರಾಮಯ್ಯ ಅಲ್ಲ. ನಿಮ್ಮ ಯೋಗ್ಯತೆಗೆ ಸರಿಯಾದ ರೀತಿಯಲ್ಲೇ ಮಾತನಾಡಿ. ಸಿದ್ದರಾಮಯ್ಯ ಕುರ್ಚಿಗಾಗಿ ಕುತಂತ್ರದ ರಾಜಕಾರಣ ಮಾಡುತ್ತಿದ್ದಾರೆ. ಬಿಜೆಪಿಯವರೂ ನನಗೆ ಸಿಎಂ ಸ್ಥಾನ ಕೊಡುವುದಕ್ಕೆ ಸಿದ್ಧರಿದ್ದರು. ಇನ್ನೂ 10 ವರ್ಷವಾದರೂ ಇವರಿಗೆ ಬಿಜೆಪಿ ತೆಗೆಯಲು ಆಗಲ್ಲ. ಜೆಡಿಎಸ್ನಿಂದ ಮಾತ್ರ ಬಿಜೆಪಿ ತೆಗೆಯೋಕೆ ಸಾಧ್ಯ ಎಂದು ಹೇಳಿದರು.

ಬ್ರಾಹ್ಮಣ ಸಮಾಜದ ಬಗ್ಗೆ ನೀಡಿದ್ದ ಹೇಳಿಕೆ ವಿವಾದ ಸ್ವರೂಪ ಪಡೆದುಕೊಂಡಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿ, ಇಡೀ ಬ್ರಾಹ್ಮಣ ಸಮುದಾಯ ನನ್ನ ವಿರುದ್ಧ ತಿರುಗಿ ಬಿದ್ದಿಲ್ಲ. ನನ್ನ ಪ್ರಶ್ನೆಗೆ ಯಾರೂ ಉತ್ತರ ಕೊಡುತ್ತಿಲ್ಲ. ಪೇಶ್ವೆ ಮೂಲದ ಬಗ್ಗೆ ಪ್ರಶ್ನೆ ಮಾಡಿದ್ದು, ಅದಕ್ಕೆ ಉತ್ತರ ಕೊಡಲಿ ಎಂದು ತಿಳಿಸಿದರು.

ಬ್ರಾಹ್ಮಣರು ಸಿಎಂ ಆಗಬಾರದೆಂದು ನಾನು ಹೇಳಿಲ್ಲ. ಪೇಶ್ವೆ ಡಿಎನ್‌ಎ ಸಿಎಂ ಆಗಬಾರದು ಎಂದು ನಾನು ಹೇಳಿದ್ದೇನೆ. ಬ್ರಾಹ್ಮಣರ ಕುರಿತ ಹೇಳಿಕೆಗೆ ನಾನು ಈಗಲೂ ಬದ್ಧನಾಗಿದ್ದೇನೆ. ಆದರೆ, ಪೇಶ್ವೆ ಡಿಎನ್‌ಎ ಇರೋರು ಮುಖ್ಯಮಂತ್ರಿ ಆಗಬಾರದು ಎಂದು ಹುಬ್ಬಳ್ಳಿಯಲ್ಲಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ.

## ವಿಶ್ವ ಯಕ್ಷಗಾನ ಸಮ್ಮೇಳನ ನಡೆಸಲು ಯೋಜನೆ: ಸಚಿವ ವಿ ಸುನೀಲ್ ಕುಮಾರ್



ಮಂಗಳೂರು: ಕರ್ನಾಟಕ ಸರ್ಕಾರವು 'ವಿಶ್ವ ಯಕ್ಷಗಾನ ಸಮ್ಮೇಳನ'ವನ್ನು ನಡೆಸಲು ಯೋಜಿಸುತ್ತಿದೆ ಮತ್ತು ಪ್ರಸ್ತಾವನೆಯ ಚರ್ಚೆಗಳು ಆರಂಭಿಕ ಹಂತದಲ್ಲಿವೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ ಸುನೀಲ್ ಕುಮಾರ್ ಹೇಳಿದ್ದಾರೆ.


ಯಕ್ಷಗಾನವು ಕರಾವಳಿ ಕರ್ನಾಟಕದಲ್ಲಿ ಜನಪ್ರಿಯವಾಗಿರುವ ಸಾಂಪ್ರದಾಯಿಕ ಜಾನಪದ ನೃತ್ಯ ಪ್ರಕಾರವಾಗಿದೆ. ಇದು ನೃತ್ಯ, ಸಂಗೀತ, ಹಾಡು, ಪಾಂಡಿತ್ಯಪೂರ್ಣ ಸಂಭಾಷಣೆಗಳು ಮತ್ತು ವರ್ಣರಂಜಿತ ವೇಷಭೂಷಣಗಳನ್ನು ಒಳಗೊಂಡಿರುವ ವಿಸ್ತಾರವಾದ ನೃತ್ಯ–ನಾಟಕ ಪ್ರದರ್ಶನವಾಗಿದೆ. ಆದ್ದರಿಂದ, ಯಕ್ಷ (ಆಕಾಶ) ಗಾನ (ಸಂಗೀತ) ಎಂದು ಹೆಸರು.

ಉಡುಪಿಯಲ್ಲಿ ಭಾನುವಾರ ರಾತ್ರಿ ನಡೆದ ರಾಜ್ಯ ಮಟ್ಟದ ಪ್ರಥಮ ಯಕ್ಷಗಾನ ಸಮ್ಮೇಳನದ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಸಂಸ್ಕೃತಿ ಇಲಾಖೆ ವತಿಯಿಂದ ಯಕ್ಷಗಾನ ಕಲಾವಿದರ ಮಾಹಿತಿ ಬ್ಯಾಂಕ್ ರಚಿಸಲಾಗುವುದು. ಈ ಮಾಹಿತಿ ಬ್ಯಾಂಕ್ ಯಕ್ಷಗಾನದ ವಿವಿಧ ಶಾಲೆಗಳು ಮತ್ತು ಅದರ ಕಲಾವಿರದ ಮಾಹಿತಿಯನ್ನು ಸಂಗ್ರಹಿಸುತ್ತದೆ ಎಂದರು.

ಈ ವರ್ಷ ರಾಜ್ಯಮಟ್ಟದ ಯಕ್ಷಗಾನ ಸಮ್ಮೇಳನಕ್ಕೆ ಸರ್ಕಾರ 2 ಕೋಟಿ ರೂ. ಗಳನ್ನು ಮಂಜೂರು ಮಾಡಿದೆ ಎಂದು ಸುನೀಲ್ ಕುಮಾರ್ ತಿಳಿಸಿದರು.

ಎರಡು ದಿನಗಳ ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಯಕ್ಷಗಾನವನ್ನು ವಾರ್ಷಿಕ ಕಾರ್ಯಕ್ರಮವನ್ನಾಗಿ ಮಾಡಲು ನಿರ್ಧರಿಸಲಾಯಿತು. ಮುಂದಿನ ವರ್ಷ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮ್ಮೇಳನ ನಡೆಯಲಿದೆ. ರಾಷ್ಟ್ರೀಯ ನಾಟಕ ಶಾಲೆ (ಎನ್‌ಎಸ್‌ಡಿ) ಮಾದರಿಯಲ್ಲಿ ರಾಷ್ಟ್ರೀಯ ಯಕ್ಷಗಾನ ಶಾಲೆಯನ್ನು ಸ್ಥಾಪಿಸಬೇಕು ಎಂದು ಸಭೆಯು ನಿರ್ಣಯವನ್ನು ಅಂಗೀಕರಿಸಿತು. ಯಕ್ಷಗಾನ ಕಲಾವಿದರ ಮಾಸಿಕ ಪಿಂಚಣಿಯನ್ನು 5 ಸಾವಿರ ರೂ.ಗೆ ಹೆಚ್ಚಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಲಾಯಿತು. ಕರ್ನಾಟಕದೊಂದಿಗೆ ಜಿಲ್ಲೆಯು ಸಾಂಸ್ಕೃತಿಕ ಬಾಂಧವ್ಯ ಹೊಂದಿರುವುದರಿಂದ ವಿವಿಧ ಸಾಂಸ್ಕೃತಿಕ ಅಕಾಡೆಮಿಗಳಿಗೆ ಸದಸ್ಯರನ್ನು ನಾಮನಿರ್ದೇಶನ ಮಾಡುವಾಗ ಮತ್ತು ಬಹುಮಾನಗಳನ್ನು ಘೋಷಿಸುವಾಗ ಕೇರಳದ ಕಾಸರಗೋಡು ಜಿಲ್ಲೆಗೆ ಸರ್ಕಾರ ಸೂಕ್ತ ಮಾನ್ಯತೆ ನೀಡಬೇಕೆಂದು ಸಮ್ಮೇಳನವು ಬಯಸಿದೆ.

## ಹುಲಿ ದಾಳಿಗೆ ಮತ್ತೊಬ್ಬ ವ್ಯಕ್ತಿ ಬಲಿ: 24 ಗಂಟೆಯಲ್ಲಿ ಇಬ್ಬರ ಸಾವು



ಕೊಡಗು: ಕೊಡಗಿನಲ್ಲಿ ಹುಲಿ ದಾಳಿ ಮುಂದುವರಿದಿದ್ದು, ಪೊನ್ನಂಪೇಟೆ ತಾಲೂಕಿನ ನಾಲ್ಕೇರಿ ಗ್ರಾಮದ ಬಳಿ ವ್ಯಾಘ್ರ ದಾಳಿಗೆ ಸೊಮವಾರ ಮತ್ತೊಬ್ಬ ವ್ಯಕ್ತಿ ಬಲಿಯಾಗಿದ್ದಾರೆ. ಇದರೊಂದಿಗೆ ಕಳೆದ 24 ಗಂಟೆಯಲ್ಲಿ ಹುಲಿ ದಾಳಿಗೆ ಒಂದೇ ಗ್ರಾಮಕ್ಕೆ ಸೇರಿದ ಇಬ್ಬರು ಮೃತಪಟ್ಟಿದ್ದಾರೆ.

ಬೆಳಗ್ಗೆ ಮೈಸೂರು ಜಿಲ್ಲೆಯ ಕೊಳವಿಗೆ ಹಾಡಿ ನಿವಾಸಿ, ಕೃಷಿ ಕಾರ್ಮಿಕ ರಾಜು(65) ಅವರು ಹುಲಿ ದಾಳಿಗೆ ಬಲಿಯಾಗಿದ್ದಾರೆ. ಬೆಳಗ್ಗೆ ತನ್ನ ಮನೆಯಿಂದ ಹೊರ ಬಂದ ರಾಜು ಅವರ ಮೇಲೆ ಕಾಫಿ ತೋಟದಲ್ಲಿ ಅಡಗಿದ್ದ ಹುಲಿ ದಿಢೀರನೇ ದಾಳಿ ನಡೆಸಿದೆ. ತಲೆ ಹಾಗೂ ಕುತ್ತಿಗೆ ಭಾಗವನ್ನು ತೀವ್ರವಾಗಿ ಗಾಯಗೊಳಿಸಿದ್ದರಿಂದ ರಾಜು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.

ಸ್ಥಳಕ್ಕೆ ನಾಗರಹೊಳೆ ಎಸಿಎಫ್ ಗೋಪಾಲ್ ಮತ್ತು ಹುಲಿ ಕಾರ್ಯಾಚರಣೆ ಪಡೆಯ ಸಿಬ್ಬಂದಿ ತೆರಳಿದ್ದಾರೆ. ರಾಜು ಅವರನ್ನು ಕೊಂದ ಹುಲಿ ಕಾಫಿ ತೋಟದಲ್ಲಿ ಅಡಗಿರುವುದು ಗೋಚರಿಸಿದೆ. ಅರಣ್ಯ ಇಲಾಖೆ ಸಿಬ್ಬಂದಿ ಹುಲಿಯನ್ನು ಸೆರೆ ಹಿಡಿಯಲು ಸಿದ್ಧತೆ ನಡೆಸಿದ್ದಾರೆ.

ಭಾನುವಾರ ಸಂಜೆ ಹುಲಿ ದಾಳಿಗೆ ಚೇತನ್(18) ಎಂಬ ಯುವಕ ಮೃತಪಟ್ಟಿದ್ದರು. ಚೇತನ್ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಬಂದಿದ್ದ ರಾಜು, ತಮ್ಮ ಮಗ ರಾಜೇಶ್ ಅವರೊಂದಿಗೆ ಉಳಿದುಕೊಂಡಿದ್ದರು. ಹುಲಿ ದಾಳಿ ನಡೆಸಿದ ಖಾಸಗಿ ಎಸ್ಟೇಟ್‌ನಲ್ಲಿ ರಾಜೇಶ್ ಎಸ್ಟೇಟ್ ಕಾರ್ಮಿಕನಾಗಿದ್ದು, ಅವರು ಎಸ್ಟೇಟ್‌ನ ಲೈನ್ ಹೌಸ್‌ನಲ್ಲಿ ವಾಸವಾಗಿದ್ದಾರೆ.

24 ಗಂಟೆಯ ಅವಧಿಯಲ್ಲಿ ಎರಡು ಸಾವು ಸಂಭವಿಸಿದ್ದು, ಆಕ್ರೋಶಗೊಂಡ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿ ಅರಣ್ಯ ಇಲಾಖೆ ವಿರುದ್ಧ ಪ್ರತಿಭಟನೆ ನಡೆಸಿದರು. ಗ್ರಾಮಸ್ಥರ ಮನವಿಗೆ ಈ ಭಾಗದ ಆರ್‌ಎಫ್‌ಒ ದಕ್ಷತೆಯಿಂದ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಅವರನ್ನು ಅಮಾನತುಗೊಳಿಸುವಂತೆ ಒತ್ತಾಯಿಸಿದರು.

## 3 ಕಿ.ಮೀ. ದೂರ ಕಾರು ಎಳೆದೊಯ್ದ ಲಾರಿ



ದೆಹಲಿ: 22 ಚಕ್ರದ ಕಂಟೇನರ್ ಲಾರಿಯೊಂದು ಸುಮಾರು 3 ಕಿ.ಮೀ.ದೂರದವರೆಗೂ ಕಾರನ್ನು ಎಳೆದೊಯ್ದು ವಿಕೃತಿ ಮೆರೆದ ಘಟನೆ ದೆಹಲಿ ಹೊರವಲಯದ ಮೀರತ್ ನಲ್ಲಿ ನಡೆದಿದೆ.

ಬಾಲಿವುಡ್ ನ ಆಕ್ಷನ್ ಸಿನಿಮಾ ಮಾದರಿಯಲ್ಲಿ ಲಾರನ್ನು ತಳ್ಳಿಕೊಂಡು ಹೋಗಲಾಗಿದ್ದು, ಕಾರಿನಲ್ಲಿದ್ದ ನಾಲ್ವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನೆಯ ವೀಡಿಯೊ ವೈರಲ್ ಆಗಿದೆ.

ಲಾರಿ ಚಾಲಕನ ವಿಕೃತಿಗೆ ಬೆಚ್ಚಿದ ಕಾರಿನಲ್ಲಿದ್ದ ನಾಲ್ವರು ಪ್ರಯಾಣಿಕರು ಕಾರಿನಿಂದ ಹಾರಿ ಅಪಾಯದಿಂದ ಪಾರಾಗಿದ್ದಾರೆ. ರಸ್ತೆ ಬದಿಯಲ್ಲಿದ್ದ ಜನರು ಈ ಘಟನೆ ನೋಡಿ ಹೌಹಾರಿದ್ದಾರೆ.

ನಾಗರಿಕರು ಹಾಗೂ ವಾಹನ ಸವಾರರು ವಾಹನ ನಿಲ್ಲಿಸುವಂತೆ ಸೂಚಿಸಿದರೂ ಕುಡಿದ ಮತ್ತಿನಲ್ಲಿದ್ದ ಲಾರಿ ಚಾಲಕ ಕಿವಿ ಮೇಲೆ ಹಾಕಿಕೊಂಡಿಲ್ಲ. ಪೊಲೀಸರು ಬಂದು ಎಚ್ಚರಿಸಿದ ಮೇಲೆಯೇ ವಾಹನ ನಿಲ್ಲಿಸಿದ್ದಾನೆ.




## ಮಂಗಳೂರು ವಿಮಾನ ನಿಲ್ದಾಣದಲ್ಲಿ ದುಬೈಗೆ ತೆರಳುತ್ತಿದ್ದ ಪ್ರಯಾಣಿಕರಿಂದ 2.6 ಕೋಟಿ ರೂ. ಮೌಲ್ಯದ ವಜ್ರ ವಶ

ಮಂಗಳೂರು: ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಎಂಐಎ) ಇಬ್ಬರು ಪ್ರಯಾಣಿಕರಿಂದ 2.6 ಕೋಟಿ ರೂಪಾಯಿ ಮೌಲ್ಯದ ವಜ್ರಗಳನ್ನು ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ವಶಪಡಿಸಿಕೊಂಡಿದೆ ಎಂದು ಅಧಿಕೃತ ಮೂಲಗಳು ಸೋಮವಾರ ತಿಳಿಸಿವೆ.

ಶನಿವಾರ ದುಬೈಗೆ ಪ್ರಯಾಣ ಬೆಳೆಸಲು ಮುಂದಾಗಿದ್ದ ಭಟ್ಕಳದ ಅನಸ್ ಮತ್ತು ಅಮರ್ ಎಂಬ ಇಬ್ಬರು ಪ್ರಯಾಣಿಕರಿಂದ ವಜ್ರಗಳನ್ನು ವಿಮಾನ ನಿಲ್ದಾಣದಲ್ಲಿ ಸಿಐಎಸ್‌ಎಫ್ ಸಿಬ್ಬಂದಿಯ ಸಹಾಯದಿಂದ ಡಿಆರ್‌ಐ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

### ಕರ್ನಾಟಕ ವಿಧಾನಸಭಾ ಚುನಾವಣೆ-2023

# ಜಿಲ್ಲೆಯ ಮತಯಂತ್ರ (ಇವಿಎಂ)ಗಳ ಪ್ರಥಮ ಹಂತದ ಪರಿಶೀಲನೆ ಆರಂಭ: ಜಿಲ್ಲಾಧಿಕಾರಿ

ಬೆಳಗಾವಿ : ಮುಂಬರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲೆಗೆ ಹಂಚಿಕೆಯಾಗಿರುವ ಎಲೆಕ್ಟ್ರಾನಿಕ್ ಮತಯಂತ್ರಗಳ(ಇವಿಎಂ) ಪ್ರಥಮ ಹಂತದ ಪರಿಶೀಲನಾಕಾರ್ಯ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಇಲ್ಲಿನ ಹಿಂಡಲಗಾ ಗ್ರಾಮದಲ್ಲಿರುವ ಭಾರತ ಚುನಾವಣಾ ಆಯೋಗದ ಮತಯಂತ್ರಗಳ ಉಗ್ರಾಣದಲ್ಲಿ ಸೋಮವಾರ(ಫೆ.13) ಆರಂಭಿಸಲಾಗಿರುವ ಪ್ರಥಮ ಹಂತದ ಪರಿಶೀಲನಾ(ಎಫ್.ಎಲ್.ಸಿ)ಕಾರ್ಯವನ್ನು ವೀಕ್ಷಿಸಿದ ಬಳಿಕ ಈ ವಿಷಯ ತಿಳಿಸಿದರು.

ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಬಳಕೆಗಾಗಿ ಜಿಲ್ಲೆಗೆ ನೀಡಲಾಗಿರುವ ಮತಯಂತ್ರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ಬಳಿಕವೇ ಅವುಗಳನ್ನು ಬಳಕೆಗೆ ಖಾತ್ರಿಪಡಿಸಲಾಗುತ್ತದೆ.

ಜಿಲ್ಲೆಯ ಒಟ್ಟು 18 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದಿಂದ ಒಟ್ಟಾರೆ 8748 ಬ್ಯಾಲೆಟ್ ಯುನಿಟ್; 7216 ಕಂಟ್ರೋಲ್ ಯುನಿಟ್ ಹಾಗೂ 6319 ವಿವಿಪ್ಯಾಟ್ ಯಂತ್ರಗಳನ್ನು ಒದಗಿಸಲಾಗಿರುತ್ತದೆ ಎಂದು ತಿಳಿಸಿದರು.



**ಇವಿಎಂ ಪರಿಶೀಲನೆ ಪಾರದರ್ಶಕ:**

ಮತಯಂತ್ರಗಳ ಪ್ರಥಮಹಂತದ ಪರಿಶೀಲನಾಕಾರ್ಯವನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ರಾಷ್ಟ್ರೀಯ ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಅತ್ಯಂತ ಪಾರದರ್ಶಕವಾಗಿ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹೇಳಿದರು.

ಇಂದಿನಿಂದ ಪರಿಶೀಲನಾಕಾರ್ಯ ಆರಂಭಗೊಂಡಿರುತ್ತದೆ. ಚುನಾವಣಾ ಆಯೋಗವೇ ನಿಯೋಜಿಸಿರುವ ಎಲೆಕ್ಟ್ರಾನಿಕ್ ಕಾರ್ಪೋರೇಷನ್ ಆಫ್ ಇಂಡಿಯಾ ಲಿಮಿಟೆಡ್ (ಇಸಿಐಎಲ್)ನ ನುರಿತ 30 ಎಂಜಿನಿಯರ್ ಗಳು ಪ್ರತಿಯೊಂದು ಮತಯಂತ್ರಗಳನ್ನು ನಿಯಮಾನುಸಾರ ಜೋಡಿಸಿ ಅವುಗಳ ಕಾರ್ಯಕ್ಷಮತೆಯನ್ನು ಖಾತ್ರಿಪಡಿಸಲಾಗುತ್ತದೆ ಎಂದು ತಿಳಿಸಿದರು.

ಪ್ರತಿದಿನ ಬೆಳಿಗ್ಗೆ 9 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ಪ್ರಥಮ ಹಂತದ ಪರಿಶೀಲನಾ ಕಾರ್ಯ ನಡೆಯುತ್ತದೆ. ರಾಷ್ಟ್ರೀಯ ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಪರಿಶೀಲನಾ ಕಾರ್ಯವನ್ನು ವೀಕ್ಷಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಪರಿಶೀಲನಾಕಾರ್ಯವು ಪಾರದರ್ಶಕವಾಗಿ ನಡೆಸಲು ಅನುಕೂಲವಾಗುವಂತೆ ವೆಬ್ ಕ್ಯಾಸ್ಟಿಂಗ್ ಕೂಡ ಮಾಡಲಾಗುತ್ತಿದ್ದು. ಎಲ್ಲಡೆ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದ್ದು, ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿರುತ್ತದೆ. ಅಗತ್ಯ ಗುರುತಿನ ಚೀಟಿ ಹೊಂದಿರುವ ಅಧಿಕೃತ ವ್ಯಕ್ತಿಗಳಿಗೆ ಮಾತ್ರ ಪ್ರವೇಶವನ್ನು ಕಲ್ಪಿಸಲಾಗುತ್ತಿದೆ ಎಂದರು.

ಜಿಲ್ಲೆಗೆ ಹಂಚಿಕೆಯಾಗಿರುವ ಪ್ರತಿಯೊಂದು ಮತಯಂತ್ರವನ್ನು ಇ.ಎಂ.ಎಸ್. ಸಾಫ್ಟ್‌ವೇರ್ ಮೂಲಕ ಸ್ಕ್ಯಾನ್ ಮಾಡಿ ಬ್ಯಾಲೆಟ್ ಯುನಿಟ್, ಕಂಟ್ರೋಲ್ ಯುನಿಟ್ ಹಾಗೂ ವಿವಿಪ್ಯಾಟ್ ಯಂತ್ರಗಳನ್ನು ಜೋಡಿಸಿ ಅವುಗಳನ್ನು ಯು.ಎ.ಟಿ. ಅಂದರೆ ಯೂಸರ್ ಅಕ್ಸೆಪ್ಟೆನ್ಸ್ ಟೆಸ್ಟ್ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಪಾಟೀಲ ತಿಳಿಸಿದರು.

ಹೈದರಾಬಾದ್ ನಿಂದ ಮತಯಂತ್ರಗಳನ್ನು ಸುರಕ್ಷಿತವಾಗಿ ತಂದು ಹಿಂಡಲಗಾ ಗ್ರಾಮದ ಉಗ್ರಾಣದಲ್ಲಿ ಸಂರಕ್ಷಿಸಿ ಇಡಲಾಗಿದ್ದು, ಹದಿನೈದು ದಿನಗಳ ಕಾಲ ಪ್ರಥಮ ಹಂತದ ಪರಿಶೀಲನೆ ನಡೆಯಲಿದೆ ಎಂದು ಇವಿಎಂ ನೋಡಲ್ ಅಧಿಕಾರಿ ಮೋಹನ ಶಿವಣ್ಣನವರ ಹೇಳಿದರು.

ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಚಿಕ್ಕೋಡಿ ಉಪ ವಿಭಾಗಾಧಿಕಾರಿ ಮಾಧವ ಗಿತ್ತೆ, ಬೆಳಗಾವಿ ಉಪ ವಿಭಾಗಾಧಿಕಾರಿ ಬಲರಾಮ್ ಚವಾಣ, ವಿವಿಧ ಕ್ಷೇತ್ರಗಳ ಚುನಾವಣಾಧಿಕಾರಿಗಳಾದ ಗೀತಾ ಕೌಲಗಿ, ಸತೀಶ್ ಕುಮಾರ್, ಡಾ.ರಾಜೀವ್ ಕೂಲೇರ್, ಇವಿಎಂ ನೋಡಲ್ ಅಧಿಕಾರಿ ಮೋಹನ ಶಿವಣ್ಣನವರ, ಚುನಾವಣಾ ಶಾಖೆಯ ತಹಶೀಲ್ದಾರ ಸಾರಿಕಾ ಶೆಟ್ಟಿ, ಸಹಾಯಕ ಚುನಾವಣಾಧಿಕಾರಿಗಳುಮತ್ತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## 6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023-2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕು ಮಟ್ಟದ ಹಡಪದ ಸಮಾವೇಶ



ಮೂಡಲಗಿ: ಹಡಪದ ಅಪ್ಪಣ್ಣ ಸಮಾಜಕ್ಕೆ ಪ್ರತ್ಯೇಕ ನಿಗಮ ರಚನೆ ಮಾಡುವ ಕುರಿತಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ಮನವಿ ಮಾಡಿಕೊಳ್ಳುತ್ತೇನೆಂದು ಶಾಸಕ, ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಸೋಮವಾರದಂದು ಪಟ್ಟಣದ ಹಡಪದ ಅಪ್ಪಣ್ಣನವರ ದೇವಸ್ಥಾನದ ಆವರಣದಲ್ಲಿ ಮೂಡಲಗಿ ತಾಲೂಕು ಮಟ್ಟದ ಹಡಪದ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಫೇಬ್ರುವರಿ 17ರಿಂದ ಬಜೆಟ್ ಅಧಿವೇಶನ ಮಂಡನೆಯಾಗುವುದರಿಂದ ಅದರ ಪೂರ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡುತ್ತೇನೆ ಎಂದು ಹೇಳಿದರು.

ಹಡಪದ ಸಮಾಜವು ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ಪ್ರಗತಿ ಸಾಧಿಸಬೇಕಾಗಿದೆ. ಸಮಾಜದ ಎಲ್ಲ ಬೇಡಿಕೆಗಳನ್ನು ಈಡೇರಿಸಲು ನಾನು ಸಿದ್ದನಿದ್ದೇನೆ. ಸಮಾಜದವರ ಬೇಡಿಕೆಯಂತೆ ಸಮುದಾಯ ಭವನ ನಿರ್ಮಿಸಲು 30 ಲಕ್ಷರೂಗಳನ್ನು ನೀಡುತ್ತೇನೆ. ಇದರಿಂದ ಸಮಾಜದವರಿಗೆ ತಮ್ಮ ಕಾರ್ಯಕ್ರಮಗಳನ್ನು ಮಾಡಲು ಅನುಕೂಲವಾಗುತ್ತದೆ. ಇದರ ಜೊತೆಯಲ್ಲಿ ಯಾದವಾಡದಲ್ಲಿ ಹಡಪದ ಅಪ್ಪಣ್ಣ ದೇವಸ್ಥಾನ ನಿರ್ಮಾಣಕ್ಕೆ ನೆರವು ಕಲ್ಪಿಸಲಾಗಿದೆ. ಸಮಾಜದ ಪ್ರಗತಿಗಾಗಿ ಶೈಕ್ಷಣಿಕವಾಗಿ ಮುಂದೆ ಬರುವಂತೆ ಸಮಾಜ ಬಾಂಧವರಿಗೆ ಕರೆ ನೀಡಿದರು.

ಹಡಪದ ಸಮಾಜವು ತೀರ ಹಿಂದುಳಿದ ಸಮಾಜವಾಗಿದೆ. ಕೆಲವರು ಸಣ್ಣ-ಸಣ್ಣ ಸಮಾಜಗಳನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಸಣ್ಣ-ಪುಟ್ಟ ಸಮುದಾಯಗಳು ಕೂಡಾ ಸಮಾಜದಲ್ಲಿ ಜಾಗೃತಿಯಾಗಬೇಕಾಗಿದೆ. ಸಮಾಜಗಳ ಸಮಗ್ರ ಅಭಿವೃದ್ದಿಗೆ ನಾವು ಕಂಕಣ ಬದ್ಧರಾಗಿದ್ದೇವೆ. ಸಂಘಟನೆಯಿಂದ ಮಾತ್ರ ನಾವು ಮುಂದೆ ಬರಲು ಸಾಧ್ಯವಾಗುತ್ತದೆ. ಕ್ಷೌರಿಕ ವೃತ್ತಿಯಲ್ಲಿರುವ ಹಡಪದ ಸಮಾಜದವರಿಗೆ ಅನ್ಯರಾಜ್ಯದವರು ಪೈಪೋಟಿ ನೀಡುತ್ತಿದ್ದು ಇದರಿಂದ ಮೂಲ ಸಮಾಜದ ವೃತ್ತಿಗೆ ಮಾರಕವಾಗಿ ಪರಿಣಮಿಸಿದೆ. ಇದರ ಬಗ್ಗೆ ಸಮಾಜದ ಬಾಂಧವರು ನನ್ನನ್ನು ಭೇಟಿ ಮಾಡಿ ತಮ್ಮ ಅಳಲು ತೋಡಿಕೊಂಡಾಗ ಪರಿಸ್ಥಿತಿಯನ್ನು ಬಗೆ ಹರಿಸಲಾಗಿದೆ. ಕಾಲಕ್ಕೆ ತಕ್ಕಂತೆ ತಮ್ಮ ವೃತ್ತಿಯಲ್ಲಿ ಆಧುನಿಕತೆಯನ್ನು ಅಳವಡಿಸಿಕೊಂಡು ಆರ್ಥಿಕವಾಗಿ ಸಬಲರಾಗುವಂತೆ ಹಡಪದ ಸಮಾಜಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸಲಹೆ ನೀಡಿದರು.

# ವಿದ್ಯಾರ್ಥಿಗಳಲ್ಲಿ ಶಿಸ್ತು ಮುಖ್ಯ: ಅಶೋಕ ಹೆಗಡೆ




ಗುಳೇದಗುಡ್ಡ : ಮಕ್ಕಳು ಎಲ್ಲಾ ಕ್ಷೇತ್ರಗಳಲ್ಲಿ ಬೆಳೆಯಲು ಶಿಸ್ತು ಮುಖ್ಯ ಅಂದಾಗ ಗುಣಾತ್ಮಕವಾಗಿ ಬೆಲೆಯಲು ಸಾಧ್ಯ ಎಂದು ಪಿಇಟಿ ಆಂಗ್ಲಮಾಧ್ಯಮ ಶಾಲೆಯ ಚೇರ್ಮನ್ ಅಶೋಕ ಹೆಗಡೆ ಹೇಳಿದರು.

ಪಟ್ಟಣದ ಭಂಡಾರಿ ಕಾಲೇಜಿನ ಸಾಂಸ್ಕೃತಿಕ ಭವನದಲ್ಲಿ ಹಮ್ಮಿಕೊಂಡ ಪಿಇಟಿಯ ರಾಠಿ ಮತ್ತು ಕಾವಡೆ ಆಂಗ್ಲ ಮಾದ್ಯಮ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನದ ನಿಮಿತ್ಯ ಕಲಾ ವೈಭವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರೊಗ್ರೆಸ್ಸಿವ್ ಎಜ್ಯುಕೇಶನ್ ಟ್ರಸ್ಟ ಚೇರ್ಮನ್ನರಾದ ಕಮಲಕಿಶೋರಜೀ ಭಂಡಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಶಿಕ್ಷಣದೊಂದಿಗೆ ಸಂಸ್ಕೃತಿ, ಶಿಸ್ತು ಸತತ ಅಧ್ಯಯನ ಶೀಲತೆ ಬಹುಮುಖ್ಯ ಎಂದರು.

ಮುಖ್ಯ ಅಥಿತಿಯಾಗಿ ಸಮಾರಂಭದಲ್ಲಿ ಪಾಲ್ಗೊಂಡ ಸಂಸ್ಥೆಯ ಹಳೆಯ ವಿದ್ಯಾರ್ಥಿ ಪೂಜಾ ಪವಾರ ವಿಶೇಷ ಉಪನ್ಯಾಸ ನೀಡಿದರು. ಪಾಲಕರ ಪ್ರತಿನಿಧಿಯಾದ ಚೆನ್ನಮ್ಮ ಪ್ರಶಾಂತ ಜವಳಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮಕ್ಕಳಿಗೆ ಬಹುಮಾನ ಪ್ರಶಸ್ತಿ ವಿತರಿಸಲಾಯಿತು. ವಿ.ಬಿ.ಹಳ್ಳೂರು ವಾರ್ಷಿಕ ವರದಿವಾಚನ ಮಾಡಿದರು. ನಂತರ ವಿದ್ಯಾರ್ಥಿಗಳು ಕಲಾ ವೈಭವದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಿದರು.

ಸಮಾರಂಭದಲ್ಲಿ ವಿಠ್ಠಲ ಕಾವಡೆ, ರಾಜು ತಾಪಡಿಯಾ, ರವಿ ಅಂಗಡಿ, ಜಗದೀಶ ಸೋನಿ, ವಿಶ್ವನಾಥ ಅಂಗಡಿ, ಸಿದ್ದರಾಮಯ್ಯ ಪುರಾಣಿಕಮಠ, ಮುರೆಗೆಪ್ಪ ಬನ್ನಿ, ಆರ್.ಆರ್.ರಾಠಿ, ಮಂಜುನಾಥ ಉಂಕಿ, ಮುಖ್ಯ ಶಿಕ್ಷಕಿ ಜೆ.ಜೆ.ಲೋಬೋ, ಎಸ್.ಎನ್.ಮಾಲಪಾಣಿ, ಎಚ್.ವಿ.ಹೊಕ್ರಾನಿ ಶಾಲೆಯ ಎಲ್ಲ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

# ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿಕೊಟ್ಟರೇ ಹಮಾಲರಿಗೆ ನಿವೇಶನ: ಎಂ.ದಿವಾಕರ ಬಾಬು ವಾಗ್ದಾನ

ಬಳ್ಳಾರಿ: ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿಕೊಟ್ಟರೆ ವಿವಿಧ ವಿಭಾಗಗಳಲ್ಲಿ ದುಡಿಯುತ್ತಿರುವ ಎಲ್ಲ ಹಮಾಲರಿಗೆ 25*30 ವಿಸ್ತೀರ್ಣದ ನಿವೇಶನಗಳನ್ನು ಕೇವಲ 1 ಸಾವಿರ ರೂ. ನಲ್ಲಿ ನೀಡುವುದಾಗಿ ಮಾಜಿ ಸಚಿವರು ಹಾಗೂ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿಗಳೂ ಆದ ಎಂ.ದಿವಾಕರಬಾಬು ವಾಗ್ದಾನ ಮಾಡಿದರು.

ಇಲ್ಲಿನ ಮುಂಡ್ರಿಗಿ ಕೈಗಾರಿಕಾ ಪ್ರದೇಶದ 2ನೇ ಹಂತದ ಅಗ್ರೋಟೆಕ್ ಆವರಣದಲ್ಲಿ ರೈಸ್ ಮಿಲ್, ಕಾಟನ್ ಮಿಲ್ ಮತ್ತು ಎ.ಸಿ.ಗೋಡಾನ್ ಹಮಾಲರ ಸಂಘಟನೆಯ ವತಿಯಿಂದ ಆಯೋಜಿಸಿದ್ದ ನಾವು ನಿಮಗಾಗಿ-ನೀವು ನಮಗಾಗಿ ಸಮಾವೇಶದಲ್ಲಿ ಹಮಾಲರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಹಮಾಲರಿಗೆ ಇನ್ಶೂರೆನ್ಸ್ ಮತ್ತು ಇಎಸ್‌ಐ ಸೇರಿದಂತೆ ಎಲ್ಲ ರೀತಿಯ ಕಾರ್ಮಿಕ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದ್ದೇ ಕಾಂಗ್ರೆಸ್ ಪಕ್ಷ ಎಂದರು.




ನಾನು ಹೆಚ್ಚಿಗೇನೂ ಹೇಳುವುದಿಲ್ಲ. ಸುಳ್ಳು ಹೇಳುವ ಜಾಯಮಾನ ನನ್ನದಲ್ಲ. ಹಮಾಲರು, ಕಾರ್ಮಿಕರ ಏನೇ ಕಷ್ಟಗಳಿದ್ದರೂ ಎಂಥದೇ ಸಂದರ್ಭದಲ್ಲೂ ನಾನು ನಿಮ್ಮ ಜೊತೆಗೆ ಇರುತ್ತೇನೆ. ನಿಮ್ಮೆಲ್ಲ ಕಷ್ಟ-ನಷ್ಟಗಳಿಗೆ ಪರಿಹಾರ ಕಂಡುಕೊಳ್ಳುವ ಪಕ್ಷವೆಂದರೆ ಅದು ಕಾಂಗ್ರೆಸ್ ಪಕ್ಷ ಮಾತ್ರ. ಕಳೆದ 18 ವರ್ಷದ ಹಿಂದೆಯೇ ನಾನು 600 ಜನ ಹಮಾಲರಿಗಾಗಿ ಸ್ಥಳ ಒದಗಿಸಿದ್ದೆ. ಇಂದಿಗೂ ಯಾವುದೇ ನಾಯಕ, ಯಾವುದೇ ಸರ್ಕಾರ ಬಂದರೂ ನಿಮಗೆಲ್ಲ ಮನೆಗಳನ್ನು ಕಟ್ಟಿಸಿಕೊಡಲಾಗಲಿಲ್ಲ. ಈ ಕೊರತೆ ನೀಗಿಸಲು ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷದಿಂದ ನನಗೆ ಟಿಕೆಟ್ ನೀಡಿದಲ್ಲಿ ಈ ಬಾರಿ ಮತ್ತೆ ನನ್ನ ಕೈ ಹಿಡಿದರೆ ನಾನೇ ಒಂದು ಲೇಔಟ್ ಮಾಡಿ ನಿಮಗೆಲ್ಲರಿಗೂ 25*30 ಅಳತೆಯ ನಿವೇಶನಗಳನ್ನು ಮಾಡಿ ಹಂಚಿಕೆ ಮಾಡುತ್ತೇನೆ. ಇದು ನನ್ನ ವಾಗ್ದಾನ. ಜಾಸ್ತಿ ಮಾತನಾಡಿದರೆ ಅದು ಉಪನ್ಯಾಸ ಆಗುತ್ತದೆ. ಹೀಗಾಗಿ ನಾನು ಹೆಚ್ಚಿಗೇನೂ ಮಾತನಾಡುವುದಿಲ್ಲ. ಆದರೆ ನಿವೇಶನಗಳನ್ನು ಫ್ರೀ ಕೊಡಲ್ಲ. ನಿಮ್ಮಿಂದ ರೂ.1 ಸಾವಿರ ಪಡೆಯುತ್ತೇನೆ ಎಂದರು.

ರೈಸ್ ಮಿಲ್ ಮತ್ತು ಕಾಟನ್ ಮಿಲ್ ಹಾಗೂ ಎ.ಸಿ.ಗೋಡಾನ್ ಹಮಾಲರ ಸಂಘಟನೆಯ ಧುರೀಣ ಕಾಕರ್ಲತೋಟ ವೀರೇಶ್ ಅವರು ಮಾತನಾಡಿ, ನಾವೆಲ್ಲರೂ ಈಗ ಒಗ್ಗಟ್ಟಾಗಬೇಕಾಗಿದೆ. ಮುಂಬರುವ ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷದಿಂದ ಎಂ.ದಿವಾಕರಬಾಬು ಅವರಿಗೇ ಟಿಕೆಟ್ ನೀಡಬೇಕೆಂದು ಪಕ್ಷದ ವರಿಷ್ಠರಲ್ಲಿ ಮನವಿ ಮಾಡೋಣ.

ಎಂ.ದಿವಾಕರಬಾಬು ಅವರಿಗೆ ಟಿಕೆಟ್ ಲಭಿಸಿದರೆ ಅವರ ಗೆಲುವು ನಿಶ್ಚಿತ. ಅವರನ್ನು ಗೆಲ್ಲಿಸಿಕೊಡುವ ಹೊಣೆಗಾರಿಕೆ ನಮ್ಮದು. ಅವರು ಗೆದ್ದರೆ ಹಮಾಲರು ಮತ್ತು ಕಾರ್ಮಿಕರ ಯಾವುದೇ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸುತ್ತಾರೆ. ಅವರನ್ನು ಯಾವುದೇ ಸಾಮಾನ್ಯ ವ್ಯಕ್ತಿಯೂ ಕೂಡ ನೇರವಾಗಿ ಸಂಪರ್ಕಿಸಿ ತಮ್ಮ ಕೆಲಸ ಕಾರ್ಯಗಳನ್ನು ಮಾಡಿಕೊಳ್ಳಬಹುದು ಎಂದರು.

ಇದಕ್ಕೂ ಮುನ್ನ ಎಪಿಎಂಸಿ, ತರಕಾರಿ, ಫ್ರುಟ್ಸ್, ಫಿಟ್ಟರ್, ಕಿರಾಣಿ ಸೇರಿದಂತೆ ನಾನಾ ವಿಭಾಗಗಳಲ್ಲಿ ಹಮಾಲರಾಗಿ ದುಡಿಯುತ್ತಿರುವ ಕೆಲ ಹಮಾಲರು ತಮ್ಮ ಸಮಸ್ಯೆಗಳು ಮತ್ತು ಬೇಡಿಕೆಗಳನ್ನು ಸಮಾವೇಶದಲ್ಲಿ ಮಾಜಿ ಸಚಿವ ಎಂ.ದಿವಾಕರ ಬಾಬು ಅವರ ಸಮ್ಮುಖದಲ್ಲಿ ಮಂಡಿಸಿದರು.

ಹಮಾಲರ ಸಂಘದ ಮಾಜಿ ಧುರೀಣ-ರಾದ ತಿಮ್ಮಪ್ಪ, ಅಂದ್ರಾಳು ತಿಮ್ಮಪ್ಪ, ಕೃಷ್ಣಪ್ಪ ಒಳಗೊಂಡಂತೆ ರೈಸ್ ಮಿಲ್ ಮತ್ತು ಕಾಟನ್ ಮಿಲ್ ಹಾಗೂ ಎ.ಸಿ.ಗೋಡಾನ್ ಹಮಾಲರ ಸಂಘಟನೆಯ ಪದಾಧಿಕಾರಿಗಳು, ಸದಸ್ಯರು ಮತ್ತು 2000 ಜನ ಹಮಾಲರು, ಕಾಂಗ್ರೆಸ್ ಪಕ್ಷದ ಯುವ ರಾಜ್ಯ ಪ್ರಧಾನ ಕಾರ್ಯದರ್ಶಿ ಹನುಮ ಕಿಶೋರ್ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

## ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022-23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080-35254757 ಇಮೇಲ್: postmetrichelp@karnataka.gov.in ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಚೇತನ ಮಕ್ಕಳ ರಾಜ್ಯಮಟ್ಟದ ಕ್ರೀಡಾಕೂಟ: ಬೆಳಗಾವಿ ಶಾಲೆಯ ಮಕ್ಕಳಿಗೆ ಬಹುಮಾನ

ಬೆಳಗಾವಿ: ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಕೊರಟಗೆರೆಯಲ್ಲಿ ಜರುಗಿದ ವಿಶೇಷ ಚೇತನ ಮಕ್ಕಳ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಬೆಳಗಾವಿ ನಗರದ ಕಿವುಡು ಮಕ್ಕಳ ಸರ್ಕಾರಿ ಶಾಲೆಯ ವಿದ್ಯಾರ್ಥಿನಿಯರು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಬಹುಮಾನ ಗಳಿಸಿದ್ದಾರೆ.


ಕುಮಾರಿ ತಾವುರಾ ಮುಲ್ಲಾ (ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ ) ಹಾಗೂ ಕುಮಾರಿ ವಿದ್ಯಾ ಶ್ರೀನಾಥ್ ಕದಂ ಓಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿ ಶಾಲೆಗೆ ಕೀರ್ತಿ ತಂದಿರುತ್ತಾರೆ.

ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಬಹುಮಾನ ಗಳಿಸಿರುವ ವಿದ್ಯಾರ್ಥಿನಿಯರನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಬಸವರಾಜ್, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು ನಾಮದೇವ ಬಿಲ್ಕರ್ ಹಾಗೂ ಕಿವುಡು ಮಕ್ಕಳ ಸರ್ಕಾರಿ ಶಾಲೆಯ ಅಧೀಕ್ಷಕರಾದ ಮಂದಾಕಿನಿ ವಂಡಕರ ಇವರು ಅಭಿನಂದಿಸಿದ್ದಾರೆ.



ಮಕ್ಕಳಿಗೆ ತರಬೇತಿ ನೀಡಿದ ಶಿಕ್ಷಕಿಯರಾದ ರತ್ನಮ್ಮ ಹಾಗೂ ಸವಿತಾ ಹೋಳಿ ಅವರಿಗೂ ಕೂಡ ಅಭಿನಂದನೆ ಸಲ್ಲಿಸಿದ್ದಾರೆ. ಕ್ರೀಡಾಕೂಟದಲ್ಲಿ ಬಹುಮಾನ ಗಳಿಸಿರುವ ಮಕ್ಕಳನ್ನು ಹಾಗೂ ಶಿಕ್ಷಕಿಯರನ್ನು ಮಾಸ್ತಮರ್ಡಿಯ ಪ್ರೌಢಶಾಲೆಯಲ್ಲಿ ಸೋಮವಾರ(ಫೆ.13) ನಡೆದ ಕಲಿಕಾ ಹಬ್ಬದಲ್ಲಿ ಶಿಕ್ಷಣ ಇಲಾಖೆಯ ವತಿಯಿಂದ ಸನ್ಮಾನಿಸಲಾಯಿತು.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿಯ ವಡ್ಡರಭಾವಣಿ, ಯಾರಮಾಳ ರೋಡ, ವಡಗಾವಿಯ ನಿವಾಸಿಯಾದ ಬಾಬು ತಾಯಪ್ಪ ಜಂತಿನಕಟ್ಟಿ(65) ಇವರು ಫೆ.11, 2023 ರಂದು ಮುಂಜಾನೆ 6 ಗಂಟೆಯಿಂದ ಕಾಣೆಯಾಗಿದ್ದಾರೆ ಎಂದು ಈತನ ಹಂಡತಿ ಚೌಡೇಶ್ವರಿ ಬಾಬು ಜಂತಿನಕಟ್ಟಿ ಇವರು ಶಹಾಪೂರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯು 5 ಪೂಟ 5 ಇಂಚ ಎತ್ತರವಿದ್ದು, ದುಂಡುಮುಖ, ನೆಟ್ಟನೆಮೂಗು, ಸಾಧಾರಣ ಮೈಕಟ್ಟು, ಗೋದಿಗೆಂಪು ಮೈಬಣ್ಣ ಹೊಂದಿರುತ್ತಾನೆ. ಹಾಗೂ ಕನ್ನಡ, ಮರಾಠಿ, ಹಿಂದಿ ಭಾಷೆ ಮಾತನಾಡುತ್ತಾನೆ ಮತ್ತು ಕ್ರೀಮ್ ಬಣ್ಣದ ಫುಲ್ ತೋಳಿನ ಶರ್ಟ, ಬೂದು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ದೊರಕಿದಲ್ಲಿ ಪೊಲೀಸ್ ಆಯುಕ್ತರು, ಬೆಳಗಾವಿ ರವರಿಗೆ ಅಥವಾ ಪೊಲೀಸ್ ಇನ್ಸಪೆಕ್ಟರ, ಶಹಾಪೂರ ಪೊಲೀಸ ಠಾಣೆ ಬೆಳಗಾವಿ ರವರಿಗೆ ಸಂಪರ್ಕಿಸಬಹುದು ಅಥವಾ ಬೆಳಗಾವಿ ನಗರ ಪೊಲೀಸ್ ಕಂಟ್ರೋಲ್ ರೂಮ್ 0831-2405233, ಶಹಾಪೂರ ಪೊಲೀಸ ಠಾಣೆ, ಬೆಳಗಾವಿ. ದೂರವಾಣಿ ಸಂ-0831-2405244, ಪಿ.ಐ, ಶಹಾಪೂರ ಪಿಎಸ್. 9480804046 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಶಹಾಪೂರ ಪೊಲೀಸ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯ ಜನತಾ ಪಕ್ಷ ಅಧಿಕಾರ ಚುಕ್ಕಾಣಿ ಹಿಡಿಯಲು ಪಕ್ಷದ ಕಾರ್ಯಕರ್ತರ ನಿಷ್ಠಾವಚಿತ ಸೇವೆಯೆ ಕಾರಣ

ಗೋಕಾಕ: ದೇಶದಲ್ಲಿ ಹಾಗೂ ರಾಜ್ಯಗಳಲ್ಲಿ ಭಾರತೀಯ ಜನತಾ ಪಕ್ಷ ಅಧಿಕಾರ ಚುಕ್ಕಾಣಿ ಹಿಡಿಯಲು ಪಕ್ಷದ ಕಾರ್ಯಕರ್ತರ ನಿಷ್ಠಾವಚಿತ ಸೇವೆಯೆ ಕಾರಣವೆಂದು ಮಾಜಿ ಸಚಿವ ಹಾಗೂ ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ರವಿವಾರದಂದು ಸಂಜೆ ನಗರದ ಮಯೂರ ಆಂಗ್ಲ ಮಾಧ್ಯಮ ಶಾಲೆ ಆವರಣದಲ್ಲಿ ಭಾರತೀಯ ಜನತಾ ಪಾರ್ಟಿಯ ಗೋಕಾಕ ವಿಧಾನಸಭಾ ಮತಕ್ಷೇತ್ರದ ಬೂತ್ ಅಧ್ಯಕ್ಷರ ಹಾಗೂ ಪೇಜ್ ಪ್ರಮುಖರ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಭಾರತೀಯ ಜನತಾ ಪಕ್ಷದಲ್ಲಿ ಕಾರ್ಯಕರ್ತರೆ ಜೀವಾಳವಾಗಿದ್ದು, ಪಕ್ಷವು ಸಹ ಕಾರ್ಯಕರ್ತರಿಗೆ ಹೆಚ್ಚಿನ ಮಹತ್ವವನ್ನು ನೀಡುತ್ತಿದೆ. ಕಾರ್ಯಕರ್ತರ ಪರಿಶ್ರಮದಿಂದಲೆ ಪಕ್ಷವು ಅಧಿಕಾರದ ಚುಕ್ಕಾಣಿಯನ್ನು ಹಿಡಿದಿದೆ. ಮುಂಬರುವ ವಿಧಾನ ಸಭಾ ಹಾಗೂ ಲೋಕಸಭಾ ಚುನಾವಣೆಗೆ ಕಾರ್ಯಕರ್ತರು



ಈಗಿನಿಂದಲೆ ಕಾರ್ಯ ಪ್ರವೃತ್ತರಾಗಿ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವದರೊಂದಿಗೆ ದೇಶದ ಅಭಿವೃದ್ಧಿಗೆ ಶ್ರಮಿಸಬೇಕು.

ಇಂದಿನ ಕಾರ್ಯಕರ್ತರ ಉತ್ಸಾಹವನ್ನು ನೋಡಿದರೆ ನನ್ನ 1999 ದಾಖಲೆಯನ್ನು ಮುರಿದು ಹೊಸ ಇತಿಹಾಸವನ್ನು ನೀವುಗಳು ನಿರ್ಮಿಸುವದು ನಿಶ್ಚಿತ. ಗೋಕಾಕ ಹಾಗೂ ಅರಭಾಂವಿಯ ಕ್ಷೇತ್ರಗಳ ಗೆಲುವಿನ ಜವಾಬ್ದಾರಿ ನಿಮ್ಮದಾಗಿದೆ. ಜಿಲ್ಲೆಯ 16 ಕ್ಷೇತ್ರಗಳು ಹಾಗೂ ಇತರ ಜಿಲ್ಲೆಗಳಲ್ಲೂ ಪ್ರಚಾರ ನಡೆಸಿ, 140 ಸೀಟಗಳೊಂದಿಗೆ ಮತ್ತೊಮ್ಮೆ ಬಿಜೆಪಿ ಅಧಿಕಾರಕ್ಕೆ ತರಲು ನಾವು ಕಾರ್ಯಪ್ರವೃತ್ತರಾಗಿದ್ದೆವೆ ಎಂದರು.

ನಾವು ಮಾನವ ಧರ್ಮ ಒಂದೆ ಎನ್ನುವ ಬಸವಣ್ಣನವರ ತತ್ವದಲ್ಲಿ ಕಾರ್ಯಪ್ರವೃತ್ತರಾಗೋಣ. ಜಾತಿ ಮತ ಭೇದ ಮಾಡದೆ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡೋಣ. ಸಿಡಿಯಂತಹ ಮಹಾನ ನಾಯಕರಿಂದ ಕಾಂಗ್ರೆಸ್‌ಗೆ ಭವಿಷ್ಯವಿಲ್ಲದಂತಾಗಿದೆ. ದಿಲ್ಲಿ ಹಾಗೂ ರಾಜ್ಯದಲ್ಲಿ ಬಿಜೆಪಿ ಪಕ್ಷದ ನಾಯಕರು ನನಗೆ ನೀಡುತ್ತಿರುವ ಸಹಕಾರದಿಂದ ನನಗೆ ಈ ಪಕ್ಷಕ್ಕೆ ಬಂದಿದ್ದು ಹೆಮ್ಮೆಯೆನಿಸುತ್ತಿದೆ.

ಈಗ ಸಚಿವ ಸ್ಥಾನ ತಪ್ಪಿದರು ಮುಂದಿನ ದಿನಗಳಲ್ಲಿ ಹೆಚ್ಚಿನ ಸ್ಥಾನ ಮಾನ ದೊರೆಯುವುದು. ಈಗ ಜಿಲ್ಲೆಯಾಧ್ಯಂತ ಯುದ್ಧೋಪಾದಿಯಲ್ಲಿ ಪಕ್ಷ ಬಲಪಡಿಸಲು ಕಾರ್ಯನಿರ್ವಹಿಸುತ್ತಿದ್ದೇನೆ. ಬಿಜೆಪಿ ಪಕ್ಷಕ್ಕೆ ಒಳ್ಳೆಯ ಭವಿಷ್ಯವಿದ್ದು, ದೇಶದ ಅಭಿವೃದ್ಧಿ ಈ ಪಕ್ಷದಿಂದ ಮಾತ್ರ ಸಾಧ್ಯವಿದೆ. ಕಾರ್ಯಕರ್ತರು ಮತ್ತೊಮ್ಮೆ ಅಧಿಕಾರಕ್ಕೆ ಪಕ್ಷವನ್ನು ತರುವದರೊಂದಿಗೆ ರಾಮರಾಜ್ಯ ನಿರ್ಮಿಸಲು ಶ್ರಮಿಸುವಂತೆ ಕರೆ ನೀಡಿದರು.

ಬಿಜೆಪಿ ವಿಶೇಷ ವಕ್ತಾರರಾಗಿ ಆಗಮಿಸಿದ್ದ ಆದರ್ಶ ಗೋಖಲೆ ಮಾತನಾಡಿ, ಆದರ್ಶ ಸಮಾಜ ನಿರ್ಮಾಣ ಮಾಡುತ್ತ ನಾವೆಲ್ಲ ಒಂದೆ ಭಾವನೆ ತುಂಬಿಸಿ, ಗತವೈಭವದ ಭಾರತವನ್ನು ನಿರ್ಮಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರ ಕೈಬಲಪಡಿಸಲು ಕಾರ್ಯಕರ್ತರು ಶ್ರಮಿಸಬೇಕು.

ದೇಹಿ ಭಾರತ ಧಾತಾ ಭಾರತವಾಗಿ ಬದಲಾಗುತ್ತಿದೆ. ನಮ್ಮ ಸ್ವಾಭಿಮಾನದ ಹಾಗೂ ಆತ್ಮ ವಿಶ್ವಾಸದ ಬದುಕನ್ನು ಮೋದಿಯವರು ನೀಡಿದ್ದಾರೆ.

ಗೋಕಾಕ ಮತಕ್ಷೇತ್ರದಿಂದ ದಾಖಲೆಯ ಮತಗಳನ್ನು ಪಕ್ಷಕ್ಕೆ ನೀಡಿ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಬೇಕಾಗಿದೆ. ನರ್ಮದಾ ನದಿಯ ಯೋಜನೆಯಂತೆ ಗೋಕಾಕದಲ್ಲೂ ಶಾಸಕ ರಮೇಶ ಜಾರಕಿಹೊಳಿ ಅವರು ನೀರಾವರಿ ಯೋಜನೆಗಳನ್ನು ಜಾರಿಗೊಳಿಸಿ ಈ ಭಾಗಕ್ಕೆ ನಿರಂತರ ವಿದ್ಯುತ್ ಕುಡಿಯುವ ನೀರಿನೊಂದಿಗೆ ಶ್ರಮಿಸುತ್ತ ಜನರ ಕನಸನ್ನು ಸಾಕಾರಗೊಳಿಸುತ್ತಿದ್ದಾರೆ. ಲಕ್ಷ ದಾಖಲೆಯ ಅಂತರದಲ್ಲಿ ಅವರನ್ನು ಗೆಲ್ಲಿಸುವಂತೆ ಕೋರಿದರು.

ವೇದಿಕೆಯ ಮೇಲೆ ಬಿಜೆಪಿ ಪಕ್ಷದ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮನ್ನವರ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಗೋಕಾಕ ವಿಧಾನಸಭಾ ಬಿಜೆಪಿ ಪ್ರಭಾರಿ ಮಹಾಂತೇಶ ವಕ್ಕುಂದ, ಒಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಸಿ, ನಗರಸಭೆ ಅಧ್ಯಕ್ಷ ಜಯಾನಂದ ಹುಣಚ್ಯಾಳ ಇದ್ದರು.

## ಪರಿಹಾರ ಮೊತ್ತ 50 ಸಾವಿರಕ್ಕೆ ಹೆಚ್ಚಿಸುವಂತೆ ಸದನದಲ್ಲಿ ಆಗ್ರಹ

ಬೀದರ್ : ಕಾಲುಬಾಯಿ ರೋಗ ಮತ್ತು ಇತರೆ ಕಾಯಿಲೆಗಳಿಂದ ಮೃತಪಟ್ಟ ಜಾನುವಾರುಗಳಿಗೆ ಪ್ರಸ್ತುತ ನೀಡುತ್ತಿರುವ ಪರಿಹಾರಧನದ ಮೊತ್ತ ಬಹಳಷ್ಟು ಕಡಿಮೆಯಿದ್ದು, ಅದನ್ನು 50 ಸಾವಿರ ರೂಪಾಯಿಗಳಿಗೆ ಹೆಚ್ಚಿಸಬೇಕೆಂದು ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಸದನದಲ್ಲಿ ಆಗ್ರಹಿಸಿದರು.



ಬೆಂಗಳೂರಿನ ವಿಧಾನಸೌಧದಲ್ಲಿ ಸೋಮವಾರ ನಡೆದ ಬಜೆಟ್ ಅಧಿವೇಶನದ ಎರಡನೇ ದಿನದ ಕಲಾಪದಲ್ಲಿ ಪಾಲ್ಗೊಂಡು, ಕಾಲುಬಾಯಿ ರೋಗ ಮತ್ತು ಇತರೆ ಕಾಯಿಲೆಗಳಿಂದ ಮೃತಪಟ್ಟ ಜಾನುವಾರುಗಳಿಗೆ ಸಂಬಂಧಿಸಿದ ಚುಕ್ಕೆಗುರುತಿನ ಪ್ರಶ್ನೆ ಕೇಳಿ ಮಾತನಾಡಿದ ಅವರು, ಮೃತ ಜಾನುವಾರುಗಳಿಗೆ ಸಂಬಂಧಿಸಿದಂತೆ ಸರ್ಕಾರ ನೀಡಿದ ಉತ್ತರವನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳಬೇಕೆಂದು ಒತ್ತಾಯಿಸಿದರು.

ಬೀದರ್ ಜಿಲ್ಲೆಯಲ್ಲಿ 108, ಬೀದರ್ ದಕ್ಷಿಣ ಕ್ಷೇತ್ರದಲ್ಲಿ 04 ಜಾನುವಾರುಗಳು ಮೃತಪಟ್ಟಿವೆ ಎಂದು ಸಚಿವರು ಉತ್ತರ ನೀಡಿದ್ದಾರೆ. ವಾಸ್ತವವಾಗಿ ನೋಡುವುದಾದರೇ ಕ್ಷೇತ್ರದಲ್ಲಿ ಇನ್ನೂ ಹೆಚ್ಚಿನ ಜಾನುವಾರುಗಳು ಮೃತಪಟ್ಟಿವೆ. ಮೃತ ಕರುವಿಗೆ 05 ಸಾವಿರ ರೂ., ದೊಡ್ಡಜಾನುವಾರುಗಳಿಗೆ 20 ಸಾವಿರ ರೂ. ಪರಿಹಾರ ನೀಡಲಾಗುತ್ತಿದೆ ಎಂದು ಉತ್ತರದಲ್ಲಿ ತಿಳಿಸಲಾಗಿದೆ.

ಒಂದು ಆಕಳು 1 ಲಕ್ಷ ರೂ.ಗಿಂತ ಕಡಿಮೆ ಮೊತ್ತದಲ್ಲಿ ಸಿಗುವುದಿಲ್ಲ. ರೈತರ ಪರವಾದ ಸರ್ಕಾರ, ಬಡವರ ಪರವಾದ ಸರ್ಕಾರ ಅಂದ್ರೆ ಇದೇನಾ..? ಏನಿದು ಎಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಆಕ್ರೋಶಗೊಂಡರು.

ಮಧ್ಯಪ್ರವೇಶಿದ ಸಚಿವ ಮಾಧುಸ್ವಾಮಿರವರು, ಸರ್ಕಾರವನ್ನು ಸಮರ್ಥನೆ ಮಾಡಿಕೊಳ್ಳುವ ಪ್ರಯತ್ನ ಮಾಡಿದರು. ಸರ್ಕಾರ ನೀಡುತ್ತಿರುವ ಪರಿಹಾರದ ಮೊತ್ತವನ್ನು ಕನಿಷ್ಟ 50 ಸಾವಿರ ರೂ.ಗಳಿಗೆ ಹೆಚ್ಚಿಸಬೇಕು. ಈಗ ನೀಡುತ್ತಿರುವ ಪರಿಹಾರ ನ್ಯಾಯಯುತವಾದದ್ದಲ್ಲ ಎಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಒತ್ತಾಯಿಸಿದರು. ಸಿಂಧನೂರು ವಿಧಾನಸಭಾ ಕ್ಷೇತ್ರದ ಶಾಸಕ ವೆಂಕಟರಾವ್ ನಾಡಗೌಡರು ಸೇರಿದಂತೆ ಅನೇಕರು ಬಂಡೆಪ್ಪ ಖಾಶೆಂಪುರ್ ರವರ ಮಾತಿಗೆ ಧ್ವನಿ ಗುಡಿಸಿದರು.

ಉತ್ತರ ನೀಡಿ ಮಾತನಾಡಿದ ಪಶು ಸಂಗೋಪನೆ ಸಚಿವ ಪ್ರಭು ಚವ್ಹಾಣ್ ರವರು, ಚರ್ಮಗಂಟು ರೋಗಕ್ಕೆ ಬೇರೆ ಯಾವ ರಾಜ್ಯದಲ್ಲೂ ಪರಿಹಾರ ನೀಡುತ್ತಿಲ್ಲ. ಮೊದಲ ಬಾರಿಗೆ ನಾನು ಕರ್ನಾಟಕದಲ್ಲಿ ಆರಂಭಿಸಿದ್ದೇನೆ. 37 ಕೋಟಿ ರೂ. ಪರಿಹಾರ ನೀಡಲಾಗಿದೆ. ಇನ್ನೂಳಿದದ್ದು ನೀಡಬೇಕಿದೆ. ಪರಿಹಾರದ ಮೊತ್ತವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳೊಟ್ಟಿಗೆ ಚರ್ಚಿಸುತ್ತೇನೆ ಎಂದರು.

## ಫೆ. 25 ರವರೆಗೆ ಬೋಗಸ್ ಕಾರ್ಮಿಕ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ

ಕೊಪ್ಪಳ: ಜಿಲ್ಲಾ ಕಾರ್ಮಿಕ ಇಲಾಖೆಯಿಂದ ನಕಲಿ ದಾಖಲಾತಿ ಸೃಷ್ಟಿಸಿ ಗುರುತಿನ ಚೀಟಿ ಪಡೆದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಲ್ಲದವರ ಕಾರ್ಡುಗಳನ್ನು ರದ್ದುಪಡಿಸಲು ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ ಕೈಗೊಳ್ಳಲಾಗಿದೆ.

ನಕಲಿ ದಾಖಲಾತಿ ಸೃಷ್ಟಿಸಿ ಗುರುತಿನ ಚೀಟಿ ಪಡೆದಿರುವ ಫಲಾನುಭವಿಗಳು ಸ್ವ-ಇಚ್ಛೆಯಿಂದ ಮಂಡಳಿಗೆ ಗುರುತಿನ ಚೀಟಿಯನ್ನು ಹಿಂತಿರುಗಿಸಿದಿದ್ದಲ್ಲಿ ಮುಂದಿನ ಕಾನೂನು ಕ್ರಮವನ್ನು ಕೈಬಿಡಲಾಗುವುದು ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ರವರು ಆದೇಶ ಹೊರಡಿಸಿದ್ದಾರೆ. ಈ ಹಿನ್ನಲೆಯಲ್ಲಿ ಪರಿಶೀಲನೆಗೆ ಒಳಗಾದ ಫಲಾನುಭವಿಯು ನಕಲು ದಾಖಲಾತಿಯನ್ನು ಸೃಷ್ಟಿಸಿ ನೋಂದಣಿಯಾಗಿರುವುದು ಕಂಡುಬಂದಲ್ಲಿ, ಸರ್ಕಾರದ ಅಧಿಸೂಚನೆ 2022ರ ಆಗಸ್ಟ್ 18ರ ತಿದ್ದುಪಡಿ ನಿಯಮ-20(7)ರನ್ವಯ ಕಾರ್ಮಿಕರ ನೋಂದಣಾಧಿಕಾರಿಯು ತನ್ನ ಅಧಿಕಾರವನ್ನು ಚಲಾಯಿಸಿ, ಸೇವಾಸಿಂಧು ತಂತ್ರಾಂಶದಲ್ಲಿ ಅಂತಹ ಫಲಾನುಭವಿಯ ನೋಂದಣಿಯನ್ನು 'ಫ್ರೀಜ್' ಮಾಡುವುದು ಮತ್ತು ಆ ಫಲಾನುಭವಿಯ ವೈಯಕ್ತಿಕ ಕಡತದಲ್ಲೂ ರದ್ಧತಿಯನ್ನು ದಾಖಲಿಸುವುದಾಗಿದೆ.

ಅಭಿಯಾನ ಸಂದರ್ಭದಲ್ಲಿ ಬೋಗಸ್ ಫಲಾನುಭವಿಯು ಸ್ವ-ಇಚ್ಛೆಯಿಂದ ನಕಲು ನೋಂದಣಿಯನ್ನು ಒಪ್ಪಿಕೊಂಡು ಗುರುತಿನ ಚೀಟಿಯನ್ನು ಹಿಂದಿರುಗಿಸದಿದ್ದಲ್ಲಿ, ಅವರಿಂದ ಒಪ್ಪಿಗೆ ಪತ್ರವನ್ನು ಪಡೆದು ಅವರ ಮೇಲಿನ ಮುಂದಿನ ಕಾನೂನು ಕ್ರಮವನ್ನು ಕೈಬಿಡುವುದು ಮತ್ತು ನೋಂದಣಿ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಫ್ರೀಜ್/ ರದ್ದು ಮಾಡುವುದು ಮತ್ತು ಕಡತದಲ್ಲಿ ರದ್ದುಗೊಳಿಸುವುದು ಹಾಗೂ ಈಗಾಗಲೇ ಪಡೆದಿರುವ ವಿವಿಧ ಸೌಲಭ್ಯಗಳನ್ನು ವಸೂಲಿ ಮಾಡಲು ಕ್ರಮಕೈಗೊಳ್ಳುವುದು.


ಅಭಿಯಾನದ ನಂತರವು ಸಂಬಂಧಪಟ್ಟ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರು ಅಥವಾ ನೋಂದಣಾಧಿಕಾರಿಯು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬೋಗಸ್ ಕಾರ್ಡುಗಳನ್ನು ಗುರುತಿಸಿ ರದ್ದುಗೊಳಿಸುವ ಕಾರ್ಯವನ್ನು ನಿರಂತರವಾಗಿ ನಿರ್ವಹಿಸುವರು.

ಈ ನಿಟ್ಟಿನಲ್ಲಿ ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡು ನೋಂದಣಿ ರದ್ಧತಿ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವಕರಲ್ಲಿ ಹಿಂದುತ್ವದ ಅರಿವು ಮೂಡಿಸಲು ಸಭೆ

ಕಲಕೇರಿ: ಯುವಕರಲ್ಲಿ ಹಿಂದುತ್ವದ ಅರಿವು ಮೂಡಿಸಲು ಮಠ ಮಂದಿರಗಳಲ್ಲಿ ಜನರನ್ನು ಸೇರಿಸಿ ಸತ್ಸಂಗ ಏರ್ಪಡಿಸಬೇಕೆಂದು ವಿಜಯಪುರ ಜಿಲ್ಲಾ ವಿ.ಹಿ.ಪ ಸಹ ಕಾರ್ಯದರ್ಶಿ ಶೇಖರಗೌಡ ಹರನಾಳ ಕಲಕೇರಿ ಸಮೀಪದ ಆಲಗೂರದಲ್ಲಿ ನಡೆದ ಕಲಕೇರಿ ಶಕ್ತಿ ಕೇಂದ್ರದ ಪ್ರಮುಖ ಕಾರ್ಯಕರ್ತರ ಬೈಠಕನಲ್ಲಿ ಹೇಳಿದರು.

ಯುವಕರು ಸಂಸ್ಕಾರವಂತರಾಗಿ ದೇಶಾಭಿಮಾನ ಬೆಳೆಸಿಕೊಂಡು ಘರ್ವದಿಂದ ಹಿಂದೂ ಎಂದು ಘಂಟಾಘೋಷವಾಗಿ ಹೇಳಬೇಕು, ಲವ್ ಜಿಹಾದ್ ಮತ್ತು ಮತಾಂತರದ ವಿರುದ್ಧ ಸಿಡಿದೆಳಬೇಕು. ನಮ್ಮ ಧರ್ಮದವರು ಅನ್ಯಧರ್ಮಕ್ಕೆ ಮತಾಂತರವಾಗುವುದನ್ನು ತಡೆಗಟ್ಟಬೇಕು, ಅನ್ಯ ಧರ್ಮಕ್ಕೆ ಹೋಗುವುದಕ್ಕೆ ಬಿಡಬಾರದು. ಅನ್ಯ ಧರ್ಮದವರು ಏನೆಲ್ಲಾ ಪ್ರೀತಿ ಆಮಿಷ ತೋರಿಸಿ ನಮ್ಮ ಧರ್ಮದವರನ್ನು ಸೆಳೆಯುತ್ತಿದ್ದಾರೆ, ಆ ಸೆಳೆತಕ್ಕೆ ನಮ್ಮ ಧರ್ಮದವರು ಒಳಗಾಗಬಾರದು. ನಮ್ಮ ಧರ್ಮದವರನ್ನು ಮತಾಂತರವಾಗದಂತೆ ನೋಡಿಕೊಂಡಾಗ ಧರ್ಮ ಉಳಿಯಲು ಸಾಧ್ಯ ಎಂದು ಮಾತನಾಡಿದರು.



ಕೊಲ್ಲಾಪುರದ ಕನ್ನೇರಿ ಮಠದ ಆಶ್ರಮದಲ್ಲಿ ಶ್ರೀಗಳ ಅದ್ಭುತ ಕಲ್ಪನೆಯ ಪಂಚಭೂತ ಲೋಕೋತ್ಸವ ನಮ್ಮ ದೇಶದಲ್ಲಿ ಇದೆ ಮೊದಲ ಭಾರಿಗೆ ನಡೆಯುವದರಿಂದ ಇದೆ ಫೆಬ್ರವರಿ 19 ರಿಂದ 26ರ ವರೆಗೆ ನಡೆಯುವ ಕಾರ್ಯಕ್ರಮದಲ್ಲಿ ನೀವೆಲ್ಲರೂ ಭಾಗಿಯಾಗಿ ಈ ನೆಲದ ಮಹಾನ್ ಪರಂಪರೆ, ಸಂಸ್ಕೃತಿ, ನಾನಾ ತರದ ಕಲೆಗಳು, ಸಮೃದ್ಧ ಜಾನಪದ, ಸಾಹಿತ್ಯ, ಸಾವಯವ, ಅರೋಗ್ಯಕರವಾದ ಕೃಷಿ ಒಟ್ಟಾರೆ ಭಾರತದ ಸಂಪೂರ್ಣ ದರ್ಶನದ ಉತ್ಸವ ನಡೆಯಲಿದೆ ಇದರ ಸದುಪಯೋಗ ಪಡೆಸಿಕೊಳ್ಳಬೇಕೆಂದು ಕರೆ ನೀಡಿದರು.

ಈ ವೇಳೆ ತಾಲೂಕ ಸತ್ಸಂಗ ಪ್ರಮುಖ ಶ್ರೀಧರ್ ಭಜಂತ್ರಿ, ಕಲಕೇರಿ ಶಕ್ತಿ ಕೇಂದ್ರ ಕಾರ್ಯದರ್ಶಿ ರವಿ ಹೊಕ್ರಾಣಿ, ಮಲ್ಲು ದರಿ ದೇವಣ್ಣ ನಾಗೂರ, ಸಂತೋಷ ಭಜಂತ್ರಿ, ರವಿ ಚಿಗರಿ, ಚಂದ್ರು ದರಿ, ಶಿವಾನಂದ ಕೆ, ಯಲ್ಲಾಲಿಂಗ ಅಲಗೂರ, ಸಂತೋಷ ತಮ್ಮನಗೋಳ, ಇನ್ನು ಅನೇಕ ಪ್ರಮುಖ ಕಾರ್ಯಕರ್ತರು ಭಾಗಿಯಾಗಿದ್ದರು.

## ಕುದಿಯುವ ನೀರಿನ ಪಾತ್ರೆಯೊಳಗೆ ಬಿದ್ದು 4ವರ್ಷದ ಬಾಲಕಿ ಸಾವು

ಸಿರುಗುಪ್ಪ :ನೀರು ಕಾಯಿಸಲು ಬೆಂಕಿಯ ಮೇಲೆ ಇಟ್ಟಿದ್ದ ಪಾತ್ರೆಯೊಳಗಿನ ಕುದಿಯುವ ನೀರಿನಲ್ಲಿ ಇಳಿದು ಸಾವನ್ನಪ್ಪಿದ ಬಘಟನೆ ಸಿರುಗುಪ್ಪ ಪೋಲೀಸ್ ಠಾಣಾ ವ್ಯಾಪ್ತಿಯಲ್ಲಿನರಾ ರಾವಿ ಗ್ರಾಮದಲ್ಲಿ ಶುಕ್ರವಾರ ನಡೆದಿದೆ.

ಮೃತದುರ್ದೈವಿ ಅಮೂಲ್ಯ 4ವರ್ಷದ ಮಗುವಾಗಿದ್ದು, ಮಲ್ಲಯ್ಯ ಮತ್ತು ಉಮಾದೇವಿ ದಂಪತಿಯ ಮಗಳೆಂದು ತಿಳಿದು ಬಂದಿದೆ.

ಠಾಣೆಯಲ್ಲಿದೂರು ನೀಡಿರುವ ಮಗುವಿನ ತಾಯಿ ಉಮಾದೇವಿಯು ಪೆ.10 ರಂದು ತನ್ನಅತ್ತೆ ಮತ್ತು ಪತಿಹೊಲಕ್ಕೆ ಹೋಗಿದ್ದರು. ಶುಕ್ರವಾರ ಸಂಜೆ ಸ್ನಾನಕ್ಕೆಂದು ನೀರು ಕಾಯಿಸಲು ಪಾತ್ರೆ ಇಟ್ಟು ತಾನು ಬಚ್ಚಲು ಮನೆಗೆ ಸ್ನಾನ ಮಾಡಲು ತೆರಳಿದಾಗ 11 ತಿಂಗಳ ಕೂಸು ಲಕ್ಷ್ಮಿಯೊಂದಿಗೆ ಆಟವಾಡುತ್ತಿದ್ದ ಅಮೂಲ್ಯ ಪಾತ್ರೆಯಲ್ಲಿ ಕುದಿಯುವ ನೀರಿನೊಳಗೆ ಇಳಿದಿದ್ದಾಳೆ.

ಕಿರುಚಿದಾಗ ಬಂದು ನೋಡಲುತನ್ನ ಮಗು ಕುದಿಯುವ ಪಾತ್ರೆಯೊಳಗೆ ಬಿದ್ದು ಒದ್ದಾಡುತ್ತಿದ್ದಾಗ ಮೇಲಕ್ಕೆತ್ತುವುದರೊಳಗೆ ಕಾಲಿನಿಂದ ಎದೆಯವರೆಗೂ ಸುಟ್ಟಿದ್ದ ಚರ್ಮ ಸಂಪೂರ್ಣವಾಗಿ ಕಿತ್ತು ಬರುವಂತಿತ್ತು.

ನೆರೆಯ ಮುತ್ತಮ್ಮ ಮಲ್ಲಯ್ಯ ಬಂದಿದ್ದು ವಿಷಯವನ್ನು ತನ್ನ ಪತಿಗೆ ತಿಳಿಸಿ ಚಿಕಿತ್ಸೆಗಾಗಿ ನಗರದ ತಾಲೂಕು ಸರ್ಕಾರಿ ಆಸ್ಪತ್ರೆಗೆ ಆ್ಯಂಬುಲೆನ್ಸ್‌ನಲ್ಲಿ ಬಂದೆವು. ಬ್ಯಾಂಡೇಜ್ ಹಾಕಿ ಪ್ರಾಥಮಿಕಚಿಕಿತ್ಸೆ ಮಾಡಿದ ವೈದ್ಯರು ಹೆಚ್ಚಿನ ಚಿಕಿತ್ಸೆಗೆ ವಿಮ್ಸ್ ಹೋಗಲು ಸೂಚಿಸಿದರು. ಅಷ್ಟರಲ್ಲಿ ತನ್ನಗಂಡ ಆಸ್ಪತ್ರೆಗೆ ಬಂದಿದ್ದು, ಗಂಡ, ಅತ್ತೆ, ಮಲ್ಲಯ್ಯ ಮತ್ತುತಾನು ವಿಮ್ಸ್‌ಆಸ್ಪತ್ರೆಗೆ ಕರೆದು ಕೊಂಡು ಹೋಗಿ ದಾಖಲಿಸಲಾಗಿದ್ದು, ಮಗಳು ಗುಣಮುಖವಾಗದೇ ಸಾವನ್ನಪ್ಪಿರುತ್ತಾಳೆ.

ಅಮೂಲ್ಯಳ ಸಾವಿನ ಬಗ್ಗೆ ಯಾವುದೇ ಅನುಮಾನವಿಲ್ಲವೆಂದು ಮಗುವಿನ ತಾಯಿ ಉಮಾದೇವಿ ಇಂದುಠಾಣೆಗೆ ಬಂದು ದೂರು ನೀಡಿದ್ದು ಪ್ರಕರಣ ದಾಖಲಿಸಲಾಗಿದೆಂದು ಠಾಣೆಯ ಪಿ.ಎಸ್.ಐಕೆ. ರಂಗಯ್ಯ ತಿಳಿಸಿದ್ದಾರೆ.

## ಅಂಗವಿಕಲ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ನಗರದ ಶ್ರೀ ರೇಣುಕಾ ದೇವಿ ಉದ್ಯೋಗಸ್ತ ಅಂಗವಿಕಲ ಹಾಗೂ ಅಂಗವಿಕಲ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯಾವುದೇ ಉದ್ಯೋಗದಲ್ಲಿರುವ ವಿದ್ಯಾರ್ಥಿನಿಯರು, ವಿವಿಧ ಶಾಲಾ ಕಾಲೇಜುಗಳಲ್ಲಿ ಪ್ರವೇಶ ಪಡೆದ ಹಾಗೂ ತರಬೇತಿ ಪಡಯುತ್ತಿರುವ ವಿದ್ಯಾರ್ಥಿನಿಯರಿಗೆ ವಸತಿ ನಿಲಯ ಪ್ರವೇಶವನ್ನು ಪಡೆಯಬಹುದು.

ಜಿಲ್ಲೆಯ ಆಸಕ್ತ ಉದ್ಯೋಗಸ್ತ ಅಂಗವಿಕಲರು, ಅಂಗವಿಕಲ ವಿದ್ಯಾರ್ಥಿನಿಯರು ಅರ್ಜಿಗಳನ್ನು ಸಲ್ಲಿಸಬಹುದು.

ಪ್ರವೇಶ ಪಡೆದಂತಹ ಅಂಗವಿಕಲ ವಿದ್ಯಾರ್ಥಿನಿಯರಿಗೆ ವಸತಿ, ಊಟ, ಹಾಗೂ ಹೊದಿಕೆಯನ್ನು ಉಚಿತವಾಗಿ ನೀಡಲಾಗುವುದು.

ಅರ್ಜಿ ಸಲ್ಲಿಸವ ಕೊನೆಯ ದಿನಾಂಕ ಫೆ.20 2023 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 9448974894 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಸಂಚಾಲಕರಾದ ಸವಿತಾ ಎಸ್. ಕಾಂಬಳೆ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಎನ್.ಸಿ.ಸಿ. ವಿದ್ಯಾರ್ಥಿಗಳ ಸಾಧನೆ



ಬೆಳಗಾವಿ ನಗರದ ಪ್ರತಿಷ್ಠಿತ ಕೆ.ಎಲ್.ಇ. ಸಂಸ್ಥೆಯ ರಾಜಾ ಲಖಮಗೌಡ ವಿಜ್ಞಾನ (ಸ್ವಾಯತ್ತ) ಮಹಾವಿದ್ಯಾಲಯದ ಎನ್.ಸಿ.ಸಿ. ವಾಯುದಳದ 02 ಕೆಡೆಟ್ಸ್‌ಗಳು ಹಾಗೂ ಭೂದಳದ 01 ಕೆಡೆಟ್ ಪ್ರತಿಷ್ಠಿತ ಗಣರಾಜ್ಯೋತ್ಸವ-2023 ರ ಶಿಬಿರದಲ್ಲಿ ಸಕ್ರಿಯವಾಗಿ ಭಾಗವಹಿಸಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ಮಹಾವಿದ್ಯಾಲಯದ ಎನ್.ಸಿ.ಸಿ. ವಿಭಾಗವು ರಾಜ್ಯ ಮಟ್ಟದ ಪ್ರತಿಷ್ಠಿತ ಪ್ರಶಸ್ತಿಗಳ ಗೌರವಕ್ಕೆ ಭಾಜನವಾಗಿದೆ. ಎನ್.ಸಿ.ಸಿ. ಕೆಡೆಟ್ಸ್‌ಗಳು ಅದ್ವಿತೀಯ ಸಾಧನೆ ಮಾಡಿ ಗೌರವಕ್ಕೆ ಪಾತ್ರರಾಗಿದ್ದಾರೆ.

ಗಣರಾಜ್ಯೋತ್ಸವ ಶಿಬಿರದಲ್ಲಿ ಅಖಿಲಭಾರತದ 17 ಎನ್.ಸಿ.ಸಿ. ನಿರ್ದೇಶನಾಲಯಗಳ ಒಟ್ಟು 2000 ಕ್ಕು ಹೆಚ್ಚು ಕೆಡೆಟ್ಸ್‌ಗಳಲ್ಲಿ 148 ಕೆಡೆಟ್ಸ್‌ಗಳು 26 ಜನೇವರಿ 2023 ರಂದು ಗೌರವಾನ್ವಿತ ರಾಷ್ಟ್ರಪತಿಗಳ ಸಮ್ಮುಖದಲ್ಲಿ ನಡೆದ ಗಣರಾಜ್ಯೋತ್ಸವ ಪರೇಡನಲ್ಲಿ ಭಾಗವಹಿಸಿದ್ದಾರೆ. ಅವರಲ್ಲಿ ಮಹಾವಿದ್ಯಾಲಯದ ಕೆಡೆಟ್ ಗೌರಂಗ ಕಲಾಲ ಕೂಡ ಒಬ್ಬನಾಗಿದ್ದಾನೆ.

28 ಜನೇವರಿ 2023 ರಂದು ಜರುಗಿದ ಸನ್ಮಾನ್ಯ ಪ್ರಧಾನಮಂತ್ರಿಗಳ ಪಥ ಸಂಚಲನದಲ್ಲಿ ವಿವಿಧ ರಾಜ್ಯಗಳ ಎನ್.ಸಿ.ಸಿ. ನಿರ್ದೇಶನಾಲಯಗಳ 300 ಕೆಡೆಟ್ಸ್‌ಗಳು ಭಾಗವಹಿಸಿದ್ದರು. ಅವರಲ್ಲಿ ಮಹಾವಿದ್ಯಾಲಯದ ಕೆಡೆಟ್ಸ್‌ಗಳಾದ ಸಿದ್ದೇಶ ಠಾಕೂರ ಮತ್ತು ಸಂಕೇತ ಕಮತೆ ಆಯ್ಕೆ ಆಗಿ ಸನ್ಮಾನ್ಯ ಪ್ರಧಾನಮಂತ್ರಿಗಳ ಪಥ ಸಂಚಲನದಲ್ಲಿ ಭಾಗವಹಿಸಿದ್ದಾರೆ.

ವಿದ್ಯಾರ್ಥಿಗಳ ಎನ್.ಸಿ.ಸಿ. ಸಾಧನೆಗೆ ಕೆ.ಎಲ್.ಇ. ಸಂಸ್ಥೆಯ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರಾದ ಡಾ. ಪ್ರಭಾಕರ ಕೋರೆ ಅವರು, ಆಡಳಿತ ಮಂಡಳಿಯ ಸರ್ವಸದಸ್ಯರು, ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರು ಹಾಗೂ ಸದಸ್ಯರು, ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.(ಶ್ರೀಮತಿ.) ಜೆ.ಎಸ್. ಕವಳೇಕರ ಕೆ.ಎಲ್.ಇ. ಸಂಸ್ಥೆಯ ಆಜೀವ ಸದಸ್ಯರುಗಳಾದ ಡಾ. ಸತೀಶ ಎಮ್.ಪಿ., ಪ್ರೊ. ಎಸ್.ಜಿ. ನಂಜಪ್ಪನವರ ಅವರು ಮತ್ತು ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ. ವ್ಹಿ.ಸಿ. ಕಾಮಗೋಳ ಅವರು, ಉಪ-ಪ್ರಾಚಾರ್ಯರಾದ ಡಾ.ಎಸ್.ಎ. ಜವಳಿ ಅವರು, ಎನ್.ಸಿ.ಸಿ. ಅಧಿಕಾರಿಗಳಾದ ಶ್ರೀ. ನಟರಾಜ ಪಾಟೀಲ, ಡಾ. ಶಿವಾನಂದ ಬುಲಬುಲಿ ಹಾಗೂ ಮಹಾವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

## ನಾಳೆ 'ಸಿರಿ ಪುರಂದರ' ನಾಟಕ ಪ್ರದರ್ಶನ



ಬೆಳಗಾವಿ: ಕನ್ನಡ ಸಾಂಸ್ಕೃತಿಕ ಭವನದಕ್ಷೇಮಾಭಿವೃದ್ಧಿ ಸಂಘವು ಅಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರ ನೇತೃತ್ವದಲ್ಲಿ ಬುಧವಾರ 15 ಫೆಬ್ರುವರಿ 2023 ಸಂಜೆಗೆ 6.00 ಗಂಟೆಗೆ ನೆಹರು ನಗರದಲ್ಲಿರುವ ಕನ್ನಡ ಸಾಂಸ್ಕೃತಿಕ ಭವನದಲ್ಲಿ 'ಸಿರಿ ಪುರಂದರ' ನಾಟಕ ಪ್ರದರ್ಶನವನ್ನು ಆಯೋಜಿಸಿದೆ. ಈ ನಾಟಕವನ್ನು ಕಲಬುರಗಿಯ ರಂಗಾಯಣವು ಪ್ರಸ್ತುತ ಪಡಿಸಲಿದೆ.

ಶ್ರೀರಂಗರ ರಚನೆಯ ಈ ನಾಟಕದ ನಿರ್ದೇಶನ ಮಹಾದೇವ ಹಡಪದ ಹಾಗೂ ಸಂಗೀತ ರಾಮಚಂದ್ರ ಹಡಪದ ಅವರದಾಗಿದೆ.

ಆಸಕ್ತರಿಗೆ ಉಚಿತ ಪ್ರವೇಶವನ್ನು ನೀಡಲಾಗಿದ್ದು ನಾಟಕ ಪ್ರಾರಂಭಗೊಳ್ಳುವ 15 ನಿಮಿಷ ಮೊದಲು ರಂಗಮಂದಿರದಲ್ಲಿರಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ನೇಕಾರ ಸಮ್ಮಾನ ಯೋಜನೆಯಡಿ ನೇಕಾರರು ಹಾಗೂ ಕಾರ್ಮಿಕರಿಗೆ ಆರ್ಥಿಕ ನೆರವು

ಬೆಳಗಾವಿ : ವಿದ್ಯುತ್ ಮಗ್ಗ ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ ಘಟಕಗಳ ನೇಕಾರರು ಹಾಗೂ ಕಾರ್ಮಿಕರಿಗೆ ತಲಾ ರೂ.5,000/- ಗಳ ವಾರ್ಷಿಕ ಆರ್ಥಿಕ ನೆರವು ನೀಡುವ ನೇಕಾರ ಸಮ್ಮಾನ(ವಿದ್ಯುತ್ ಮಗ್ಗ) ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಸದರಿ ಯೋಜನೆಯಡಿ ನೆರವು ಪಡೆಯಲು ನೇಕಾರರ ಘಟಕಗಳು ವಿದ್ಯುತ್ ಮಗ್ಗ ಗಣತಿಯಲ್ಲಿ ನೋಂದಾಯಿಸಿಕೊಂಡಿರಬೇಕು. ಸದರಿ ಗಣತಿಯನ್ನು ಎ.ಐ.ಎಮ್.ಎಸ್ ಸಂಸ್ಥೆಯಿಂದ ಕೈಗೊಳ್ಳಲಾಗುತ್ತಿದ್ದು, ಗಣತಿಯಲ್ಲಿ ನೋಂದಾಯಿಸಲು ಬಿಟ್ಟು ಹೋದ ಘಟಕದವರು ಯಾವುದೇ ಮದ್ಯವರ್ತಿಗಳ ಆಸೆ-ಆಮಿಷಕ್ಕೆ ಒಳಗಾಗದೇ, ನೇರವಾಗಿ ಈ ಕಛೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.


ನೇಕಾರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವನ್ನು ಪಡೆಯಲು ಯಾವುದೇ ಅರ್ಜಿ ಅಥವಾ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಹಾಗೂ ಯಾವುದೇ ಶುಲ್ಕ ಇರುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ ಸಂಖ್ಯೆ: 0831-2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀರಾಮಪುರ ಕಾಲೋನಿಯ ಮೈದಾನದಲ್ಲಿ ಸ್ಪಷ್ಟತೆ ಇಲ್ಲದೇ ಬರೀ ಕಟ್ಟುವ ಕೆಡುವುದರ ಹಿಂದೆ ತಂತ್ರ ಅಡಗಿದೆ

ಬಳ್ಳಾರಿ : ಸರ್ಕಾರ ನಡೆಯುತ್ತಿರುವುದು ಜನರ ತೆರಿಗೆ ಹಣದಲ್ಲಿ ಜನಪ್ರತಿನಿಧಿಗಳು ತಮ್ಮಸ್ವಾರ್ದ.ಹಾಗೂ ಕಮಿಷನ್ ಗಾಗಿ ಕಾಮಗಾರಿಗಳನ್ನು ನಡೆಸಲು ಬಿಡುವುದಿಲ್ಲ ಎಂದು ಕಾಂಗ್ರೆಸ್ ನ ಹಿರಿಯ ಮುಖಂಡ ಮಾಜಿ. ಸಚಿವ ಎಂ.ದಿವಾಕರಬಾಬು ತಿಳಿಸಿದ್ದಾರೆ.

ನಗರದ ಶ್ರೀರಾಮಪುರಂ ಕಾಲೋನಿಯಲ್ಲಿನ ಪ್ರಾಥಮಿಕ ಹಾಗೂ ಪ್ರೌಡಶಾಲೆಯ ಬಳಿಯ ಮೈದಾನದ ಒಂದು ಭಾಗದಲ್ಲಿ ನೂತನ ಶಾಲಾ ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದೆ. ಇಲ್ಲಿ ನಡೆಯುತ್ತಿರುವ ಕಾಮಗಾರಿ ದಾರಿ ತಪ್ಪಿಸುವ ತಂತ್ರವಾಗಿದೆ. ಇಲ್ಲಿನ ಮೈದಾನ ತುಂಬಾ ವರ್ಷಗಳಿಂದ ಇದ್ದು ಇಲ್ಲಿನವರಿಗೆ ಕ್ರೀಡಾಚಟುವಟುಕಿಗೆ ಅಗತ್ಯವಾಗಿದೆ.

ನೂತನ ಶಾಲೆ ಕಟ್ಟಡ ಕಟ್ಟಿ ನಂತರ ಮೈದಾನದ ಇನ್ನೊಂದು ಭಾಗದಲ್ಲಿರುವ ಪ್ರಾಥಮಿಕ ಶಾಲೆ ಹಾಗೂ ಪ್ರೌಡಶಾಲೆ ಕೆಲ ಹಳೆಯಕಟ್ಟಡಗಳನ್ನು ದುರಸ್ತಿ ಮಾಡಬಹುದು ಎಂದರೇ ಇನ್ನು ಮೈದಾನಕ್ಕೆ ಜಾಗವೆಲ್ಲಿ ಇದು ದಾರಿ ತಪ್ಪಿಸುವ ತಂತ್ರ ವಾಗಿದೆ. ಬರೀ ಕೆಡುವುದು ಕಟ್ಟಿಸುವುದಕ್ಕೆ ಮುಂದಾಗುವುದನ್ನು ನೋಡಿದರೇ ಸ್ಪಷ್ಟತೆ ಕಂಡು ಬರದೆ ಭ್ರಷ್ಟಚಾರದ ವಾಸನೆ ಕಂಡು ಬರುತ್ತದೆ.ಇಲ್ಲಿನ ಸ್ಥಳೀಯರಿಗೆ



ಮೈದಾನದ ಅವಶ್ಯಕತೆ ಇದೆ ಇದರಿಂದ ಮೊದಲಿಗೆ ಹಳೆಯ ಶಾಲಾ ಕಟ್ಟಡವನ್ನು ತೆರವುಗೊಳಿಸಿಅಲ್ಕಿಯವರೆಗೆ ಈಗ ನಡೆಸುತ್ತಿರುವ ತರಗತಿಗಳನ್ನು ತಾತ್ಕಲಿಕ ಟೆಂಟ್ ನಿರ್ಮಿಸಿ ನಡೆಸಿ ನೂತನ ಶಾಲೆ ಪ್ರಾರಂಭಿಸಲಿ ಎಂದು ಎಂ.ದಿವಾಕರಬಾಬು ಆಗ್ರಹಿಸಿದರು.

ಸ್ಥಳೀಯರ ಜೊತೆ ಸೇರಿ ಕಾಮಗಾರಿಗೆ ಆಗಮಿಸಿದ್ದ ಎರೆಡು .ಜೆ.ಸಿ.ಬಿ ಹಾಗೂ ಟ್ರಾಕ್ಟರ್ ಗಳನ್ನು ಪ್ರತಿಭಟಿಸಿ ಕಾಮಗಾರಿ ನಿಲ್ಲಿಸುವ ಲ್ಲಿ ಮುಂದಾದರು. ಮಧ್ಯೆ ಪ್ರವೇಶಿಸಿದ ಪೋಲೀಸ್ ಅಧಿಕಾರಿಗಳು ಮನೊಲಿಸಲು ಮುಂದಾದರೂ ಪಟ್ಟು ಸಡಿಸಲದ ಕಾರಣ. ಜಿಲ್ಲಾಧಿಕಾರಿಗಳ ಜೊತೆ ದಿವಾಕರ ಬಾಬು ಪೋನ್ ಮುಖಾಂತರ ಮಾತನಾಡಿ ನಾಳೆ ಇದರ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಬಂದು ಈ ಬಗ್ಗೆಚರ್ಚಿಸಲು ಅವರು ತಿಳಿದಿದ್ದಾರೆ ಅಲ್ಲಿಯ ವರೆಗೂ ಕಾಮಗಾರಿ ನಿಲ್ಲಿಸಲು ಹೇಳಿದ್ದಾರೆ ಎಂದರು.

ಸುದ್ದಿಗಾರರ ಜೊತೆ ಮಾತನಾಡಿದ ಮಾಜಿ ಸಚಿವರು. ನಿತ್ಯ ಇಲ್ಲಿ ಯುವಕರು ಕ್ರೀಡೆಗಳಿಗಾಗಿ ಹಾಗೂ ಇನ್ನಿತರ ಚಟುವಟಿಕೆಗಳಿಗೆ ಉಪಯೋಗಿಸುತ್ತಿದ್ದಾರೆ. ಪ್ರಾಥಮಿಕ ಹಾಗೂ ಪ್ರೌಡ ಶಾಲೆ ಹಳೆಯದಾದ ಕಟ್ಟಡವನ್ನು ಕೆಡವಿ ಅಲ್ಲಿಯವರೆಗೂ ತಾತ್ಕಲಿಕ ಟೆಂಟ್ ನಲ್ಲಿ ತರಗತಿ ನಡೆಸಲಿ ಎಂದರು.

## ನಿರ್ದಿಷ್ಟ ಗುರಿಯೊಂದಿಗೆ ಹೆಜ್ಜೆಯಿಡಿ :ಡಾ. ಆರತಿ ದರ್ಶನ

ಬೆಳಗಾವಿ : ವಿದ್ಯಾರ್ಥಿಗಳು ನಿರ್ದಿಷ್ಟಗುರಿಯೊಂದಿಗೆ ಯಶಸ್ಸನ್ನು ಸಾಧಿಸಬೇಕು. ಯಶಸ್ಸು ದೊರೆಯುವ ವರೆಗೆ ಕ್ರಿಯಾಶೀಲವಾಗಿ ಪ್ರಯತ್ನದಲ್ಲಿ ತೊಡಗಿದಾಗ ಪ್ರತಿಫಲ ನಮ್ಮದಾಗುತ್ತದೆ ಎಂದು ಮಧು ಮೇಹತಜ್ಞ ವೈದ್ಯೆ ಡಾ.ಆರತಿದರ್ಶನ ಹೇಳಿದರು. ಅವರು ಲಿಂಗರಾಜ ಪಿಯು ಕಾಲೇಜಿನ ದ್ವಿತೀಯ ವರ್ಷದ ಬಿಳ್ಕೊಡುವ ಸಮಾರಂಭದಲ್ಲಿ ಸಾಧಕರಿಗೆ ಪ್ರಶಸ್ತಿಗಳನ್ನು ವಿತರಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ದ್ವಿತೀಯ ಪಿಯುಸಿ ಮಹತ್ವ ಪೂರ್ಣವಾದ ಘಟ್ಟವಾಗಿದ್ದು ಅದನ್ನು ಸವಾಲಾಗಿ ಸ್ವೀಕರಿಸಿ ಪರೀಕ್ಷೆಯನ್ನು ಎದುರಿಸಬೇಕು. ಕಾಲೇಜಿನ ದಿನಗಳು ಮತ್ತೆ ಮತ್ತೆ ದೊರೆಯುವುದಿಲ್ಲ.



ಇಲ್ಲಿಯ ಪ್ರತಿಯೊಂದು ದಿನಗಳನ್ನು ಅನುಭವಿಸಬೇಕು.


ಅದರೊಂದಿಗೆ ನಿರ್ದಿಷ್ಟವಾದ ಗುರಿಯನ್ನು ಪಡೆಯುವುದಕ್ಕಾಗಿ ಹಗಲಿರಳು ಶ್ರಮಿಸಬೇಕು. ತಂದೆತಾಯಿಗಳು ನಮ್ಮ ಮೇಲೆ ಇಟ್ಟ ಭರವಸೆಯನ್ನು ಹುಸಿಗೊಳಿಸದೆ ಕಲಿಕೆಯಲ್ಲಿ ಹೆಚ್ಚಿನಆಸಕ್ತಿಯನ್ನು ಹೊಂದಬೇಕು. ಸ್ಪರ್ಧೆಯು ಇಂದು ಎಲ್ಲ ರಂಗಗಳಲ್ಲಿ ಹಾಸುಹೊಕ್ಕಾಗಿರುವುದರಿಂದ ಅದನ್ನು ಸಮರ್ಥವಾಗಿ ಎದುರಿಸುವ ಮನೋಭಾವ ನಮ್ಮದಾಗಿರಬೇಕೆಂದು ವಿದ್ಯಾರ್ಥಿಗಳಿಗೆ ಕರೆನೀಡಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಪದವಿ ಪ್ರಾಚಾರ್ಯ ಡಾ.ಎಚ್. ಎಸ್.ಮೇಲಿನಮನಿ ಯವರು ಮಾತನಾಡುತ್ತ, ವಿದ್ಯೆಯನ್ನು ನೀಡಿದ ಗುರುಗಳು, ಸಂಸ್ಕಾರವನ್ನುಕೊಟ್ಟ ತಂದೆತಾಯಿಗಳ ಋಣವನ್ನು ತೀರಿಸುವುದು ಬಲುಕಷ್ಟ. ಗುರುಗಳಿಗೆ ತಂದೆ ತಾಯಿಗಳಿಗೆ ಮಹಾವಿದ್ಯಾಲಯಕ್ಕೆ ನಾವು ಉಪಕೃತರಾಗಿರಬೇಕು. ಒಬ್ಬ ವಿದ್ಯಾರ್ಥಿ ಸಮಾಜದಲ್ಲಿ ಉನ್ನತ ಸ್ಥಾನಮಾನಾದಿಗಳನ್ನು ಪಡೆದ-ರೆ ಆ ವಿದ್ಯಾಲಯಕ್ಕೆ ಒಂದು ಹೆಮ್ಮೆಯ ಸಂಗತಿ. ಎಲ್ಲರೂ ನಿಮಗೆ ದೊರೆತ ವಿದ್ಯೆಯನ್ನು ಸದ್‌ವಿನಿಯೋಗ ಮಾಡಿಕೊಂಡು ಸಮಾಜ ಮುಖಿಯಾಗಿ ಬದುಕಿ. ರಾಷ್ಟ್ರ ನಿರ್ಮಾಣದಲ್ಲಿ ನಿಮ್ಮದೇಆದ ವಿಶಿಷ್ಟ ಕೊಡುಗೆಯನ್ನು ನೀಡಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಪಿಯುಸಿ ಪ್ರಾಚಾರ್ಯ ಗಿರಿಜಾ ಹಿರೇಮಠ ವಾರ್ಷಿಕ ವರದಿ ವಾಚಿಸಿದರು. ಪ್ರಶಾಂತ ಕೊಣ್ಣೂರ ಸ್ವಾಗತಿಸಿದರು. ಮನೋಹರ ಜಂಗಲಿ ವಂದಿಸಿದರು. ವೇದಿಕೆಯ ಮೇಲೆ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಶ್ರೀಮತಿ ಪಾರ್ವತಿ ರಾಜಶೇಖರ, ಪ್ರಶಾಂತಖೋತ ಉಪಸ್ಥಿತರಿದ್ದರು.

ಈ ವರ್ಷದ ಆದರ್ಶ ವಿದ್ಯಾರ್ಥಿಯಾಗಿ ಸತ್ಯಂ ಚೌಗಲೆ, ಆದರ್ಶ ವಿದ್ಯಾರ್ಥಿನಿಯಾಗಿ ಪ್ರಿಯಾಂಕಾ ಕುಲಕರ್ಣಿ, ಆದರ್ಶ ಸಂಯೋಜಕರಾಗಿ ಶ್ರೇಯಂಶ್ ಮೊಕಾಶಿ, ಸುಹಾನಿ ಚಿಕ್ಕೋನ್, ವರ್ಷದ ಕ್ರೀಡಾಸಾಧಕರಾಗಿ ಧನಶ್ರೀ ಕದವ್ ಅವರಿಗೆ ಪ್ರಶಸ್ತಿಯನ್ನು ನೀಡಲಾಯಿತು.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿಯ ಕೆ. ಎಚ್ ಕಂಗ್ರಾಳಿ ಗ್ರಾಮದ 5 ನೇ ಕ್ರಾಸ್ ಜ್ಯೋತಿ ನಗರದ ನಿವಾಸಿಯಾದ ಶಿವನಗೌಡ ಬಸನಗೌಡ ಗೌಡರ(63) ಇವರು 16 ನವೆಂಬರ್ 2022 ರಂದು ಬೆಳಗ್ಗೆ 10 ಗಂಟೆಗೆ ಮಾರ್ಕೆಟ್‌ಗೆ ಹೋಗಿ ಬರುತ್ತೇನೆ ಎಂದು ಹೇಳಿ ಮನೆಯಿಂದ ಹೋದವರು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾರೆ ಎಂದು ಇವರ ಮಗ ವೀರನಗೌಡ ಶಿವನಗೌಡ ಗೌಡರ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯು 5.7 ಪುಟ್ ಎತ್ತರವಿದ್ದು, ಗೋದಿಗೆಂಪು ಮೈಬಣ್ಣ ಹೊಂದಿದ್ದು, ಸದೃಢವಾಗಿರುತ್ತಾರೆ ಕನ್ನಡ ಭಾಷೆ ಮಾತನಾಡುತ್ತಾರೆ, ಮತ್ತು ನೇರಳೆ ಬಣ್ಣದ ಅಂಗಿ ಹಾಗೂ ಕಂದು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.

ಸದರಿ ವ್ಯಕ್ತಿಯ ಬಗ್ಗೆ ಮಾಹಿತಿ ದೊರಕಿದಲ್ಲಿ ಪೊಲೀಸ್ ಆಯುಕ್ತರು ಬೆಳಗಾವಿ ನಗರ ಅಥವಾ ಪೊಲೀಸ್ ಇನ್ಸ್ಪೆಕ್ಟರ್ ಎಪಿಎಂಸಿ ಪೊಲೀಸ್ ಠಾಣೆಗೆ ಭೇಟಿ ನೀಡಬಹುದಾಗಿದೆ ಅಥವಾ 0831-2405250, 9480804106, 9480804047 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಎಪಿಎಂಸಿ ಪೊಲೀಸ್ ಠಾಣೆ, ಪೊಲೀಸ್ ಇನ್ಸ್ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಸ್ತಿ ಕ್ರೀಡೆಯ ವೈಭವ ಮರುಕಳಿಸುವಂತಾಗಲಿ: ಶಾಸಕಿ ಲಕ್ಷ್ಮೀ ಹೆಬ್ಬಾಳಕರ

ಬೆಳಗಾವಿ: "ಒಂದು ಕಾಲದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳಗಾವಿಯ ಹೆಸರು ಬೆಳಗಿಸಿದ ಕುಸ್ತಿ ಕ್ರೀಡೆ ಪ್ರಸ್ತುತದಲ್ಲಿ ಹಿಂದಿನ ಪ್ರಾಮುಖ್ಯತೆ ಕಳೆದುಕೊಂಡಿದ್ದು ಗ್ರಾಮೀಣ ಭಾಗದಲ್ಲಿ ಇದರ ಅಸ್ತಿತ್ವ ಉಳಿಸಿಕೊಂಡು ಬಂದಿರುವುದು ಶ್ಲಾಘನೀಯ. ಕುಸ್ತಿ ಕ್ರೀಡೆಗೆ ಇನ್ನೂ ಹೆಚ್ಚಿನ ಪ್ರೋತ್ಸಾಹ ಲಭಿಸಬೇಕಿದೆ" ಎಂದು ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಹೇಳಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಾಂಬ್ರಾ ಗ್ರಾಮದ ಕುಸ್ತಿ ಕಮಿಟಿಯವರು ಆಯೋಜಿಸಿದ್ದ ಜಂಗೀ ನಿಕಾಲಿ ಕುಸ್ತಿ ಪಂದ್ಯಾವಳಿಗೆ ಚಾಲನೆಯನ್ನು ನೀಡಿ ಅವರು ಮಾತನಾಡಿದರು.



"ಹಿಂದಿನ ದಿನಗಳಲ್ಲಿ ಗ್ರಾಮದಲ್ಲಿ ಕನಿಷ್ಠ ಒಂದಾದರೂ ಗರಡಿ ಮನೆ ಇರುತ್ತಿತ್ತು. ಇಂದು ಅವು ಮಾಯವಾಗಿವೆ. ಅಪರೂಪಕ್ಕೆಂಬಂತೆ ಅಲ್ಲಲ್ಲಿ ಗರಡಿಮನೆಗಳು ಕಾಣಸಿಗುತ್ತಿವೆ. ಬೆಳಗಾವಿ ಜಿಲ್ಲೆಯ ಅನೇಕ ಕುಸ್ತಿ ಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ಈ ದಿಸೆಯಲ್ಲಿ ಹೆಚ್ಚೆಚ್ಚು ಗರಡಿಮನೆಗಳನ್ನು ಆರಂಭಿಸಿ ಕುಸ್ತಿ ಕ್ರೀಡೆಯ ಹಿಂದಿನ ವೈಭವ ಮರುಕಳಿಸುವಂತೆ ಮಾಡಬೇಕಿದೆ. ಇದಕ್ಕೆ ತಾವು ಸಂಪೂರ್ಣ ಸಹಕಾರ ನೀಡಲು ಬದ್ಧ" ಎಂದರು.

ವಿವಿಧೆಡೆಗಳಿಂದ ಆಗಮಿಸಿದ್ದ ಖ್ಯಾತನಾಮ ಪೈಲ್ವಾನರ ಕುಸ್ತಿ ಪಂದ್ಯ ವೀಕ್ಷಣೆಗೆ ಸಾವಿರಾರು ಜನ ಸೇರಿದ್ದರು. ಇದಕ್ಕೂ ಮುನ್ನ ಅಖಾಡಾಕ್ಕೆ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಯಲ್ಲಪ್ಪ ಹರಜಿ, ಗಂಗಣ್ಣ ಕಲ್ಲೂರ, ಶಿವರಾಜ ಜಾಧವ್, ನಿತೀನ್ ಚಿಂಗಳೆ, ಪ್ರಮೋದ್ ತಾಡೆ, ಮಹೇಂದ್ರ ಗೋಟೆ, ಭರಮಾ ಚಿಂಗಳೆ, ನಾಗೇಶ ದೇಸಾಯಿ, ಅಬ್ದುಲ್ ಬಾಗವಾನ್, ಸಂಜು ಪಾಟೀಲ ಹಾಗೂ ಮುಂತಾದವರು ಉಪಸ್ಥಿತರಿದ್ದರು.

# ಅಭಿನಂದನಾ ಸಮಾರಂಭ



ಮುಗಳಖೋಡ: ಸಮೀಪದ ಹಂದಿಗುಂದ ಗ್ರಾಮದ ನೂತನ ಶ್ರೀ ಸಿದ್ದೇಶ್ವರ ಮಠದ ಲೋಕಾರ್ಪಣೆ ಹಾಗೂ ಗುರುವಂದನಾ ಸಮಾರಂಭದ ನಿಮಿತ್ಯ ನಡೆದ ಒಂದು ತಿಂಗಳ ನಿರಂತರ ಬಸವ ಪುರಾಣ ಪ್ರವಚನದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದ ಎಲ್ಲ ಕಾರ್ಯಕರ್ತರಿಗೆ ಶ್ರೀ ಸಿದ್ದೇಶ್ವರ ಮಠದ ಸಭಾಂಗಣದಲ್ಲಿ ಅಭಿನಂದನೆ ಸಲ್ಲಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಶೇಗುಣಸಿಯ ಶ್ರೀ ಡಾ. ಮಹಾಂತ ಶಿವಯೋಗಿಗಳು ಮಾತನಾಡಿ ಹಂದಿಗುಂದ ಗ್ರಾಮದ ಗುರು ಹಿರಿಯರು, ಭಾಗದ ಶಾಸಕರು, ಸಚಿವರು, ರಾಜಕೀಯ ಧುರೀಣರು, ತಂದೆ ತಾಯಂದಿರು, ಮಹಿಳಾ ಕಾರ್ಯಕರ್ತರು, ಮಕ್ಕಳು, ಮಹಿಳೆಯರು, ಆಡಳಿತ ಮಂಡಳಿಯವರು ಸೇರಿ ಒಟ್ಟಾರೆಯಾಗಿ ಈ ಕಾರ್ಯಕ್ರಮವನ್ನು ಅಚ್ಚು ಕಟ್ಟಾಗಿ ಯಶಸ್ವಿಗೊಳಿಸಲು ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಕಾರಣೀಕರ್ತರಾದ ಎಲ್ಲ ಕಾರ್ಯಕರ್ತರಿಗೂ ಹಾಗೂ ಭಕ್ತಾದಿಗಳಿಗೂ ಅಭಿನಂದನೆ ಸಲ್ಲಿಸಿದರು.

ಈ ಅಭಿನಂದನಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಚಿಮ್ಮಡದ ಶ್ರೀ ಪ್ರಭು ಮಹಾ ಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ಹಂದಿಗುಂದದ ಶ್ರೀ ಶಿವಾನಂದ ಮಹಾಸ್ವಾಮಿಗಳು ವಹಿಸಿದ್ದರು. ಈ ಸಂದರ್ಭದಲ್ಲಿ ರಾಮನಗೌಡ ಪಾಟೀಲ್, ಪ್ರಶಾಂತ್ ಹಿರೇಮಠ್, ಎಸ್ ಎಸ್ ತೇರದಾಳ್ ಸೇರಿದಂತೆ ಶ್ರೀಮಠದ ಆಡಳಿತ ಮಂಡಳಿಯ ಸದಸ್ಯರು ಗ್ರಾಮದ ಗುರುಹಿರಿಯರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

# ಧರ್ಮಾಚರಣೆಯಿಂದ ಜೀವನದಲ್ಲಿ ಸುಖ ಶಾಂತಿ : ಶ್ರೀ ರಂಭಾಪುರಿ ಜಗದ್ಗುರು

ಹರಪನಹಳ್ಳಿ : ಬದುಕು ಬಲಗೊಳ್ಳಲು ಮತ್ತು ಶ್ರೇಯಸ್ಸಿಗೆ ಧರ್ಮವೊಂದೇ ಆಶಾಕಿರಣ. ಧರ್ಮಾಚರಣೆಯಿಂದ ಜೀವನದಲ್ಲಿ ಸುಖ ಶಾಂತಿ ಪಡೆಯಲು ಸಾಧ್ಯವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ಪುರವರ್ಗ ಹಿರೇಮಠದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಬಹು ಜನ್ಮದ ಪುಣ್ಯದ ಫಲವಾಗಿ ಮಾನವ ಜನ್ಮ ಪ್ರಾಪ್ತವಾಗಿದೆ. ಮೌಲ್ಯಾಧಾರಿತ ಬದುಕಿಗೆ ಧರ್ಮಾಚರಣೆ ಮುಖ್ಯ. ಸಂಸ್ಕಾರ ಸಂಸ್ಕೃತಿಯಿಂದ ಸಾತ್ವಿಕ ಸಮಾಜ ಬೆಳೆಯಲು ಸಾಧ್ಯವಾಗುತ್ತದೆ. ಮನುಷ್ಯನಿಗೆ ಬುದ್ಧಿ ಶಕ್ತಿ ಬೆಳೆಯುತ್ತಿದೆ. ಆದರೆ ಶ್ರದ್ಧೆ ಭಾವನೆಗಳು ಬತ್ತಿ ಹೋಗುತ್ತಿವೆ. ಮಾತು ಹೆಚ್ಚುತ್ತಿದೆ. ಸಂಸ್ಕಾರ ಸಂಸ್ಕೃತಿ ಕೊರತೆ ಕಾಣುತ್ತೇವೆ. ಅರಿವು ಆಚರಣೆ ಇಲ್ಲದ ಮನುಷ್ಯನ ಬದುಕು ಅಶಾಂತಿಯಿಂದ ಕೂಡಿದೆ. ವೈಚಾರಿಕ ಮತ್ತು ಆಧುನಿಕತೆ ಹೆಸರಿನಲ್ಲಿ ಸತ್ಯ ನ್ಯಾಯ ಧರ್ಮವನ್ನು ಕಲುಷಿತಗೊಳಿಸಲಾಗುತ್ತಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯಾ, ಕ್ಷಮಾ, ದಾನ, ಪೂಜಾ, ಜಪ ಮತ್ತು ಧ್ಯಾನ ಎಂಬ ದಶವಿಧ ಧರ್ಮ ಸೂತ್ರಗಳ ಪರಿಪಾಲನೆಯಿಂದ ಜೀವನದಲ್ಲಿ ಶ್ರೇಯಸ್ಸನ್ನು ಕಾಣಬಹುದಾಗಿದೆ. ಎಂದರು.

ಹರಪನಹಳ್ಳಿ ತೆಗ್ಗಿನ ಸಂಸ್ಥಾನ ಮಠದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಜೀವನ ವಿಕಾಸಕ್ಕೆ ಧರ್ಮ ಪ್ರಜ್ಞೆ ಮತ್ತು ಗುರು ಬೋಧಾಮೃತ ಅವಶ್ಯಕ. ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ ಸಿದ್ಧಾಂತಗಳು ಸಕಲರ ಬಾಳಿನಲ್ಲಿ ಬೆಳಕು ಮೂಡಿಸುತ್ತವೆ ಎಂದರು.

ಹಂಪಸಾಗರ ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಅತಿಯಾದ ವೈಚಾರಿಕತೆಯಿಂದ ಮನುಷ್ಯ ಮಾನಸಿಕ ನೆಮ್ಮದಿ ಕಳೆದುಕೊಳ್ಳುತ್ತಿದ್ದಾನೆ. ಶಾಂತಿ ನೆಮ್ಮದಿಗೆ ಜೀವನಾಧಾರವಾಗಿರುವ ಧರ್ಮದ ಸತ್ಯ ಸಂಸ್ಕೃತಿಯನ್ನು ಮರೆಯಬಾರದು ಎಂದರು.

ಇದೇ ಸಂದರ್ಭದಲ್ಲಿ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಮಾರ್ಚ 3ರಿಂದ 7ರ ವರೆಗೆ ಜರುಗುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಭಿತ್ತಿಪತ್ರವನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮ ಆಯೋಜಿಸಿದ ವಿಜಯಪುರ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಪ್ರಶಾಂತ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ನಡೆಯಿತು.

ಇದಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳು ನಡೆಸಿದ ಇಷ್ಟಲಿಂಗ ಮಹಾಪೂಜೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ಆಶೀರ್ವಾದ ಪಡೆದರು.

# ಅರಭಾವಿ ವಿಧಾನಸಭೆ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆ



ಮೂಡಲಗಿ : ಅರಭಾವಿಯಲ್ಲಿ ಕಾಂಗ್ರೆಸ್ ಮತ್ತೆ ಒಗ್ಗಟ್ಟಿನ ಮಂತ್ರ ಕೇಳಿ ಬರುತ್ತಿರುವುದು ಸಂತಸದ ವಿಷಯವಾಗಿದೆ. ಈ ಸಭೆಯ ಕಾರ್ಯಕ್ರಮ ವೇದಿಕೆಯಲ್ಲಿ ಕೆಪಿಸಿಸಿ ಸದಸ್ಯ ಅರವಿಂದ್ ದಳವಾಯಿ ಹಾಗೂ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಗಳಾದ ಭೀಮಪ್ಪ ಗಡಾದ್ ಮತ್ತು ಭೀಮಶೆಪ್ಪ ಹಂದಿಗುಂದ್ ಒಟ್ಟಾಗಿ ಸೇರಿರುವುದು ಚುನಾವಣಾ ದೃಷ್ಟಿಯಿಂದ ಮಹತ್ವದ ಬೆಳವಣಿಗೆಯಾಗಿದೆ ಎಂದು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸಮಿತಿಯ ಕಾರ್ಯದರ್ಶಿ ಮತ್ತು ಕಿಶನ್‌ಗಂಜ್ ಲೋಕಸಭಾ ಸದಸ್ಯರಾದ ಡಾ. ಜಾವೇದ್ ಹೇಳಿದರು.

ಸಮೀಪದ ಕೌಲಜಗಿಯಲ್ಲಿ ಜರುಗಿದ ವಿಧಾನಸಭೆ ಚುನಾವಣೆ ನಿಮಿತ್ಯ ಅರಭಾವಿ ವಿಧಾನಸಭೆ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ಅರಭಾವಿಯಲ್ಲಿ ಕಳೆದುಕೊಂಡ ತನ್ನ ಭದ್ರಕೋಟೆಯನ್ನು ಈ ಸಾರೆ ಮರಳಿ ಗೆದ್ದುಕೊಳ್ಳುವುದು ನಿಶ್ಚಿತ. ಎಲ್ಲ ಟಿಕೆಟ್ ಆಕಾಂಕ್ಷಿಗಳು ಒಗ್ಗಟ್ಟಾಗಿ ಪ್ರಚಾರ ನಡೆಸಬೇಕೆಂದು ಮತ್ತು ಯಾರಿಗೆ ಟಿಕೆಟ್ ನೀಡಿದರೂ ತಾವೇ ಅಭ್ಯರ್ಥಿಯಂದು ತಿಳಿದುಕೊಂಡು ಕಾರ್ಯನಿರ್ವಹಿಸುವಂತೆ ಕರೆ ನೀಡಿದರು. ಕಾಂಗ್ರೆಸ್ ಪಕ್ಷದ ಚುನಾವಣಾ ಗ್ಯಾರಂಟಿ ‘ಗೃಹಲಕ್ಷ್ಮಿ’ ಮತ್ತು ‘ಗ್ರಹ ಜ್ಯೋತಿ’ ಯೋಜನೆಗಳ ಕುರಿತು ಮಾಹಿತಿಯನ್ನು ಮನೆ-ಮನೆಗೆ ತಲುಪಿಸಿದರೆ ಅದು ಕಾಂಗ್ರೆಸ್ ಪಕ್ಷದ ಗೆಲುವಿನ ರಹದಾರಿಯಾಗುತ್ತದೆ ಎಂದು ಹೇಳಿದರು.

ಕಾಂಗ್ರೇಸ್ ಮುಖಂಡ ಅರವಿಂದ ದಳವಾಯಿ ಮಾತನಾಡಿ, ಅರಭಾವಿಯಲ್ಲಿ ಅಸ್ತಿತ್ವ ಕಳೆದುಕೊಂಡಿದ್ದ ಕಾಂಗ್ರೆಸ್ ಪಕ್ಷವನ್ನು ಮತ್ತೆ ನಿಷ್ಠಾವಂತ ಕಾರ್ಯಕರ್ತರ ಪ್ರಯತ್ನದಿಂದ ಮರು ಸ್ಥಾಪಿಸಲಾಗಿದೆ. ಈ ಬಾರಿ ಎಲ್ಲರೂ ಸೇರಿ ಒಗ್ಗಟ್ಟಿನಿಂದ ಶ್ರಮಿಸಿ ಅರಭಾವಿಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರೋಣ ಎಂದು ಹೇಳಿದರು.

## ಮೂರನೇ ಅಂತಸ್ತಿದಿಂದ ಯುವಕ ಬಿದ್ದು ಯುವಕನ ಸ್ಥಿತಿ ಗಂಭೀರ



ಬೆಳಗಾವಿ: ಮೂರನೇ ಅಂತಸ್ತಿದಿಂದ ಯುವಕ ಬಿದ್ದು ಯುವಕನ ಸ್ಥಿತಿ ಗಂಭೀರ ಬೆಳಗಾವಿ ನಗರದಲ್ಲಿ ಕಟವಾ ಬಿಲ್ಡಿಂಗ್ ನಿಂದಾ ಯುವಕ ಮೂರನೇ ಅಂತಸ್ತುದಿಂದ ಕಿಡಿಕೆಯಿಂದ ಕೆಳಗೆ ಬಿದ್ದಿದ್ದಾನೆ .

26 ವಯಸ್ಸಿನ ಯುವಕ ಗೆಳೆಯರು ಗೆಳತಿಯರ ಜೊತೆ ಮೂರನೇ ಅಂತಸ್ತದಲ್ಲಿ ಪಬ್ ರೆಸ್ಟೋರೆಂಟ್ ಇರುವುದು ಪಾರ್ಟಿಗೆಂದು ಗೆಳೆಯರ ಜೊತೆ ಬಂದಿದ್ದರು ಎನ್ನಲಾಗಿದೆ.

ಮೂರನೇ ಅಂತಸ್ಥ ಕಿಟಕಿಯಿಂದ ಕೆಳಗಡೆ ಬಿದ್ದ ಪರಿಣಾಮ ಯುವಕನ ಪರಿಸ್ಥಿತಿ ಗಂಭೀರವಾಗಿದೆ ನಗರದಿಂದ ಅಂಬುಲೆನ್ಸ್ ನಲ್ಲಿ ಕೆ ಎಲ್ ಇ ಆಸ್ಪತ್ರೆಗೆ ರವಾನಿಸಲಾಗಿದೆ ಮೇಲಿಂದ ಬಿದ್ದ ಕಾರಣ ತಿಳಿದು ಬಂದಿಲ್ಲ ಪೊಲೀಸರ ತನಿಕೆಯಿಂದ ಈ ಅನಾಹುತಕ್ಕೆ ಕಾರಣ ತಿಳಿಯಬೇಕಾಗಿದೆ ಈ ಘಟನೆ ಎಪಿಎಂಸಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುತ್ತದೆ.



ಹುಳಿಯಾರಿನ ಶ್ರೀ ಶಾರದಾ ಇಂಗ್ಲೀಷ್ ಶಾಲೆಯಲ್ಲಿ ಶನಿವಾರ ನಡೆದ ವಾರ್ಷಿಕೋತ್ಸವದಲ್ಲಿ ಮಕ್ಕಳು ಮಾಡಿದ ಕಾಂತಾರದ ದೈವ ಭೂತ ಕೋಲ ನಟನೆಯು ಮೈನವಿರೇಳಿಸುವಂತಿದ್ದು ಭೂತ ಕೋಲ ಪಾತ್ರ ಮಾಡಿದ 4 ನೇ ತರಗತಿ ಸಮರ್ಥ, ಮಣಿ ಅವರ ಮೇಕಪ್ ಹಾಗೂ ಹೇಮಂತ್ ಅವರ ನೃತ್ಯ ನಿರ್ದೇಶನ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು.

# ತರಬೇತಿ ಕಾರ್ಯಾಗಾರ



ಬೆಳಗಾವಿ: ಜಿಲ್ಲಾ ಪಂಚಾಯತ ಬೆಳಗಾವಿ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ, ಚಿಕ್ಕೋಡಿ ವಿಭಾಗ, ಮತ್ತು RDS ಮುರುಗೋಡ್ ಇವರ ಸಹಯೋಗದಲ್ಲಿ ಸೋಮವಾರ ರಾಷ್ಟ್ರೀಯ ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ (KRC ತರಬೇತಿ) ಚಿಕ್ಕೋಡಿ ತಾಲೂಕಾ ಪಂಚಾಯತ್‌ಯಲ್ಲಿ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರಿಗೆ, ವಾಟರ್ ಮೇನ್, ಪಂಚಾಯ್ತಿಯ ಅಭಿವೃದ್ಧಿ ಅಧಿಕಾರಿಗಳು, ಜಲ ಜೀವನ್ ಮಿಷನ್ ಯೋಜನೆಯ ಉದ್ದೇಶ ಗುರಿ, FTK ,ನೀರಿನ ಗುಣಮಟ್ಟ ಪರೀಕ್ಷೆಯ, ನಿರ್ವಹಣೆ ಮತ್ತು ಮೇಲ್ವಿಚಾರಣೆ ಬಗ್ಗೆ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಜಿಲ್ಲಾ ಯೋಜನಾ ವ್ಯವಸ್ಥಾಪಕರಾದ ಶ್ರೀ ದೀಪಕ ಕಾಂಬಳೆ ಜೆ.ಜೆ.ಯಂ. ಯೋಜನೆಯ ಉದ್ದೇಶಗಳು, ನೀರಿನ ಗುಣಮಟ್ಟ ಪರೀಕ್ಷೆ ಮಾಡುವ ಅಗತ್ಯತೆ ಬಗ್ಗೆ, ನೀರಿನ ಮಿತ ಬಳಕೆ ಬಗ್ಗೆ ಹಾಗೂ ಸಮುದಾಯದ ಪಾಲ್ಗೊಳ್ಳುವಿಕೆ ಬಗ್ಗೆ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರಿಗೆ, ವಾಟರ್ ಮೇನ್, ನಿರ್ವಹಣೆ ಮತ್ತು ಮೇಲ್ವಿಚಾರಣೆ ಮಾಡಬೇಕೆಂದು ತಿಳಿಸಿರುತ್ತಾರೆ. ಈ ಸಂಧರ್ಭದಲ್ಲಿ ಚಿಕ್ಕೋಡಿ ತಾಲೂಕಿನ ಪಂಚಾಯ್ತಿಯ, ಸಿಬ್ಬಂದಿಗಳು, ಎಇ ವೀರಣಗೌಡ, ಮಹಾಂತೇಶ ಅಂಬಿ, ಅಭಿವೃದ್ಧಿ ಅಧಿಕಾರಿಗಳು, ನೀರು ನೈರ್ಮಲ್ಯ ಸಮಿತಿಯ ಸದ್ಯಸ್ಯರು, ವಾಟರ್ ಮೇನಗಳು, ಹಾಗೂ RDS ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಾಮೂಹಿಕ ಕಾರ್ಯಗಳ ಮೂಲಕ ಏಕತೆಯ ಭಾವ

ಹುಕ್ಕೇರಿ : ಇಂದಿನ ಆಧುನಿಕ ದಿನಮಾನಗಳಲ್ಲಿ ಸಾಮೂಹಿಕ ಕಾರ್ಯಗಳ ಮೂಲಕ ಸಮಾಜದಲ್ಲಿ ಪರಸ್ಪರ ಒಗ್ಗೂಡುವ ಹಾಗೂ ಬೆರೆಯುವ ಮನಸ್ಥಿತಿಗಳು ಉಂಟಾಗಿ ನಾವೆಲ್ಲ ಒಂದೇ ಎನ್ನುವ ಏಕತೆಯ ಭಾವ ಮೂಡಿ ಇದರಿಂದಾಗಿ ಶಾಂತಿ-ನೆಮ್ಮದಿ ಜೀವನ ನೆಲೆಯೂರುತ್ತದೆ ಎಂದು ನಿಡಸೋಸಿ ಜಗದ್ಗುರು ಪಂಚಮ ಶ್ರೀ ಶಿವಲಿಂಗೇಶ್ವರ ಸ್ವಾಮೀಜಿ ಅಭಿಪ್ರಾಯಪಟ್ಟರು.


ರವಿವಾರ ತಾಲೂಕಿನ ನಿಡಸೋಸಿಯ ಜಗದ್ಗುರು ದುರದುಂಡೀಶ್ವರ ಸಿದ್ಧ ಸಂಸ್ಥಾನ ಮಠದಲ್ಲಿ ಮಹಾಶಿವರಾತ್ರಿ ಮಹೋತ್ಸವ ನಿಮಿತ್ತ ಏರ್ಪಡಿಸಲಾಗಿದ್ದ ಸಾಮೂಹಿಕ ಗುಗ್ಗಳೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಖಾಸಗಿ ಕಾರ್ಯಕ್ರಮಗಳು ಆಡಂಬರದ ಬದುಕು ತೋರಿಸಿದರೆ ಸಾಮೂಹಿಕ ಕಾರ್ಯಗಳು ಏಕತೆಯನ್ನು ತೋರುತ್ತದೆ. ಎಲ್ಲ ಜವಾಬ್ದಾರಿಗಳನ್ನು ಪರಸ್ಪರ ಹೊತ್ತು ಅಚ್ಚುಕಟ್ಟಾಗಿ ನಿರ್ವಹಿಸಿದರೆ ಆರ್ಥಿಕ ಹಾಗೂ ಸಾಮಾಜಿಕ ದೃಷ್ಟಿಯಿಂದ ಎಲ್ಲರಿಗೂ ಅನುಕೂಲವಾಗುತ್ತದೆ.

ಈ ವರ್ಷವೂ ಸಹ ಆರ್ಥಿಕ ಅನಾನುಕೂಲತೆ ಅಥವಾ ಇನ್ನಿತರ ಕಾರಣಗಳಿಂದ ಗುಗ್ಗಳ ಸಂಸ್ಕಾರ ಪಡೆಯದೇ ಇರುವವದನ್ನು ಗಮನಿಸಿ ಮಠದಿಂದ ಸಾಮೂಹಿಕ ಗುಗ್ಗಳೋತ್ಸವ ಏರ್ಪಡಿಸಲಾಗಿದೆ ಎಂದರು.

ಚಿಕ್ಕೋಡಿ ಸಂಪಾದನಾ ಸ್ವಾಮೀಜಿ ಆಶೀರ್ವಚನ ನೀಡುತ್ತ, ಮನುಷ್ಯನ ಬದುಕಿನಲ್ಲಿ ಸಂಘ ಜೀವಿಯಾಗಿ ಬದುಕಿದರೆ ಮಾತ್ರ ಆತನ ಬದುಕಿಗೆ ಮಹತ್ವ ಬರುತ್ತದೆ. ಧಾರ್ಮಿಕ ಪರಂಪರೆಯಲ್ಲಿ ನಡೆಯುವ ಲಿಂಗದೀಕ್ಷೆ, ಗುಗ್ಗಳ, ಉಪನಯನದಂಹತ ಧಾರ್ಮಿಕ ಕಾರ್ಯಗಳು ಮನುಷ್ಯನ ಬದುಕಿನಲ್ಲಿ ಬದಲಾವಣೆ ತರುವ ಶಕ್ತಿ ಹೊಂದಿದ್ದು, ಸಾಮೂಹಿಕ ಕಾರ್ಯಗಳಲ್ಲಿ ಆಸಕ್ತಿ ತೋರುವ ಪರಂಪರೆ ಸಮಾಜದಲ್ಲಿ ಉಂಟಾಗಬೇಕು ಇದರಿಂದ ಸಮಯ, ಹಣದ ಉಳಿತಾಯದ ಜೊತೆಗೆ ಬಾಂಧವ್ಯಗಳು ಬೆಸೆಯುತ್ತವೆ ಎಂದರು.

**ಸಾಮೂಹಿಕ ಲಿಂಗದೀಕ್ಷೆ:**

ಮಠದಲ್ಲಿ ಬೆಳಿಗ್ಗೆ 6 ಗಂಟೆಗೆ ಶ್ರೀ ದುರದುಂಡೀಶ್ವರ ಕತೃ ಗದ್ದುಗೆಗೆ ವಿಶೇಷ ಪೂಜೆ ನೆರವೇರಿಸಲಾಯಿತು. ವೀರಶೈವ ಪರಂಪರೆಯ ಪ್ರಕಾರ ಪ್ರತಿಯೊಂದು ಧಾರ್ಮಿಕ ಪ್ರಕ್ರಿಯೆ ನಡೆಯುವ ಪೂರ್ವದಲ್ಲಿ ಲಿಂಗದೀಕ್ಷೆ ಪಡೆಯುವ ಪರಂಪರೆ ನಡೆದು ಬಂದಿದ್ದರಿಂದ ಗುಗ್ಗಳೋತ್ಸವ ಪೂರ್ವದಲ್ಲಿ ಚಿಕ್ಕೋಡಿ ಚರಮೂರ್ತಿ ಮಠದ ಸಂಪಾದನಾ ಸ್ವಾಮೀಜಿ ಧಾರ್ಮಿಕ ವಿಧಿ-ವಿಧಾನಗಳ ಲಿಂಗದೀಕ್ಷೆ ನೆರವೇರಿಸಿದರು.



**ಹಬ್ಬದ ವಾತಾವರಣ:**

ಸಾಮೂಹಿಕ ಗುಗ್ಗಳೋತ್ಸವದ ನಿಮಿತ್ತ ನಿಡಸೋಸಿ ಗ್ರಾಮದ ಪ್ರಮುಖ ಬೀದಿಗಳನ್ನು ಸ್ವಚ್ಛಗೊಳಿಸಿ ರಂಗೋಲಿ ಬಿಡಿಸಲಾಗಿತ್ತು. ಅಲ್ಲದೇ ಗುಗ್ಗಳದಲ್ಲಿ ಪಾಲ್ಗೊಂಡವರ ಸಂಬಂಧಿಕರು ಸೇರಿದಂತೆ ಸಹಸ್ರಾರು ಜನ ಗುಗ್ಗಳೋತ್ಸವದಲ್ಲಿ ಪಾಲ್ಗೊಂಡಿದ್ದರಿಂದ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

**ಗುಗ್ಗಳೋತ್ಸವ:**

ಸಾಮೂಹಿಕ ಗುಗ್ಗಳೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆ ಸೇರಿದಂತೆ ಮಹಾರಾಷ್ಟ್ರ ಹಾಗೂ ಗೋವಾ ಸೇರಿದಂತೆ ಶ್ರೀಮಠದಲ್ಲಿ 100ಕ್ಕೂ ಜೋಡಿ ಗುಗ್ಗಳದಲ್ಲಿ ಭಾಗವಹಿಸಿ ಗುಗ್ಗಳೋತ್ಸವ ಸಂಸ್ಕಾರ ಪಡೆದುಕೊಂಡರು.

ಗುಗ್ಗಳ ಹಂಚುಗಳಿಗೆ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ ಹಾಗೂ ಚಿಕ್ಕೋಡಿ ಸಂಪಾದನಾ ಶ್ರೀಗಳು ಅಗ್ನಿ ಪ್ರದೀಪನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ದೊರಕಿತು.

ದೇವಸ್ಥಾನದ ಆವರಣದಿಂದ ಗುಗ್ಗಳದ ಕೊಡಗಳನ್ನು ಹೊತ್ತ ಭಕ್ತಾಧಿಗಳು ಸಾಗಿದರು. ವೀರಭದ್ರ ಕುಣಿತ, ವೀರಗಾಸೆ, ಡೊಳ್ಳು ಸೇರಿದಂತೆ ಇನ್ನಿತರ ಜನಪದ ಕಲಾ ತಂಡಗಳೊಂದಿಗೆ ಗುಗ್ಗಳ ಶ್ರೀಮಠದಿಂದ ಹಿರೇಮಠದ ಮನೆಗೆ ತೆರಳಿ ಲಕ್ಷ್ಮಿದೇವಿ ದೇವಸ್ಥಾನ ಮಾರ್ಗದವರೆಗೆ, ಕಾಳಾಯಿ ಓಣಿ, ವಾಡೆ ಓಣಿ, ಮಠದ ಓಣಿಯಿಂದ ಶಂಕರಲಿಂಗದೇವಸ್ಥಾನ ಮಾರ್ಗವಾಗಿ ಶ್ರೀಮಠದ ಬಸವೇಶ್ವರ ದೇವಸ್ಥಾನ ಭಾವಿಹತ್ತಿರ ಸಂಚರಿಸಿತು.

ನಂತರ ಶ್ರೀಗಳು ಅಗ್ನಿ ಹೊತ್ತ ಹಂಚಿಗೆ ಹಾಲು-ತುಪ್ಪ ಎರೆಯುವ ಮೂಲಕ ಗುಗ್ಗಳ ಸಂಸ್ಕಾರ ಕೊನೆಗೊಂಡಿತು.

**ಮೈನವಿರೇಳಿಸಿದ ಪುರವಂತಿಕೆ:**

ಜಾತ್ರೆ ಅಂಗವಾಗಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ 25ಕ್ಕೂ ಹೆಚ್ಚು ಪುರವಂತರು ತಮ್ಮ ವಿವಿಧ ಪೌರಾಣಿಕ ಒಡಪುಗಳ ಮೂಲಕ ಕೈಯಲ್ಲಿಖಡ್ಗ ಹಿಡಿದು ಝಳಪಿಸಿತ್ತಾ ಜಾತ್ರೆಯಲ್ಲಿ ಸೇರಿದ್ದ ಜನರನ್ನು ಬೆರಗುಗೊಳಿಸಿದರಲ್ಲದೆ ತಮ್ಮ ಅದ್ಭುತ ಪುರವಂತಿಕೆ ಕಲೆಯನ್ನು ಪ್ರದರ್ಶಿಸಿದರು.

**ಅನ್ನಸಂತರ್ಪಣೆ:**

ಮಧ್ಯಾಹ್ನ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಊರುಗಳಿಂದ ಆಗಮಿಸಿದ್ದ ಭಕ್ತಾದಿಗಳಿಗೆ ಅನ್ನಸಂತರ್ಪಣೆ ನಡೆಯಿತು. ಈ ಸಂದರ್ಭದಲ್ಲಿಸಾವಿರಾರು ಭಕ್ತರು ಅನ್ನಪ್ರಸಾದ ಸೇವಿಸಿದರು.

ಈ ಸಂದರ್ಭದಲ್ಲಿ ಶಾಂತೇಶಗೌಡ ಪಾಟೀಲ, ದುಂಡಪ್ಪಾ ಗಳಗಿ, ಎ.ಎಸ್.ಪಾಟೀಲ, ರಾಯಪ್ಪಾ ನಿಂಗನೂರಿ, ಶಂಕರ ಮಾದನ್ನವರ, ಗುರುಲಿಂಗ ಸೊಲ್ಲಾಪೂರಿ, ಸುಭಾಷ ಪಾಟೀಲ, ಮಹಾಲಿಂಗ ಕುಂಬಾರ, ಬಿ.ಆರ್. ಪಾಟೀಲ, ಬಿ.ಕೆ.ಪಾಟೀಲ, ಮಲ್ಲಪ್ಪಾ ತನೋಡಿ, ಮಲ್ಲಯ್ಯಾ ಕಾಡದೇವರಮಠ, ತಮ್ಮಣ್ಣ ಸೊಲ್ಲಾಪೂರಿ ಉಪಸ್ಥಿತರಿದ್ದರು.

# ಐಸಿಸಿ ಜಾಗತಿಕ ಪಂದ್ಯಗಳಿಗೆ ಪಾಲಿಕ್ಯಾಬ್ ಇಂಡಿಯಾ ಪಾಲುದಾರಿಕೆ

ಮುಂಬೈ : ಎಲೆಕ್ಟ್ರಿಕಲ್ ಸರಕು ತಯಾರಿಕೆಯ ಭಾರತದ ಪ್ರಮುಖ ಕಂಪನಿಯಾಗಿರುವ ಮತ್ತು ಹಣಕಾಸು ವರ್ಷ 2022ರಲ್ಲಿ ರೂ 122ಕ್ಕೂ ಹೆಚ್ಚುಶತಕೋಟಿ ಮೊತ್ತದ ಕ್ರೋಡೀಕೃತ ವಹಿವಾಟು ನಡೆಸಿರುವ ಪಾಲಿಕ್ಯಾಬ್ ಇಂಡಿಯಾ ಲಿಮಿಟೆಡ್, ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ ಜೊತೆಗೆ ಅಧಿಕೃತ ಪಾಲುದಾರಿಕೆಯನ್ನು ಪ್ರಕಟಿಸಿದೆ.




2023ರ ವರ್ಷಾಂತ್ಯದವರೆಗೆ ನಡೆಯಲಿರುವ ವೇಳಾಪಟ್ಟಿ ಒಳಗೊಂಡಿರುವ ‘ಐಸಿಸಿ’ದ ಪುರುಷರು ಮತ್ತು ಮಹಿಳೆಯರ ಜಾಗತಿಕ ಮಟ್ಟದ ಎಲ್ಲ ಪ್ರಮುಖ ಕ್ರಿಕೆಟ್ ಪಂದ್ಯಗಳನ್ನು ಈ ಪಾಲುದಾರಿಕೆ ಒಳಗೊಂಡಿದೆ. ದಕ್ಷಿಣ ಆಫ್ರಿಕಾದಲ್ಲಿ ಆಯೋಜನೆಗೊಂಡಿರುವ ಐಸಿಸಿಮಹಿಳಾ ಟಿ20ವಿಶ್ವಕಪ್, ಇಂಗ್ಲೆಂಡ್‌ನಲ್ಲಿ ನಡೆಯಲಿರುವ ಐಸಿಸಿವಿಶ್ವ ಟೆಸ್ಟ್ ಚಾಂಪಿಯನ್ ಶಿಪ್‌ನ ಅಂತಿಮ ಪಂದ್ಯ ಮತ್ತು ಐಸಿಸಿಪುರುಷರ ಕ್ರಿಕೆಟ್ ವರ್ಲ್ಡ್ ಕಪ್ 2023 ಸೇರಿದಂತೆ ಈ ವರ್ಷಾಂತ್ಯದವರೆಗೆ ನಿಗದಿಪಡಿಸಲಾಗಿರುವ ‘ಐಸಿಸಿ’ನ ಪುರುಷರು ಮತ್ತು ಮಹಿಳೆಯರ ಜಾಗತಿಕ ಮಟ್ಟದ ಎಲ್ಲ ಪಂದ್ಯಗಳಿಗೆ ಪಾಲಿಕ್ಯಾಬ್‌ನ ಪ್ರಾಯೋಜಕತ್ವ ಒಳಗೊಂಡಿರಲಿದೆ.

ಪಾಲಿಕ್ಯಾಬ್ ಇಂಡಿಯಾವು, ಭಾರತದ ಮನ್ನಣೆಗೆ ಪಾತ್ರವಾಗಿರುವ ಬಹು ಜನಪ್ರಿಯ ಬ್ರ್ಯಾಂಡ್ ಆಗಿದೆ. ಐಸಿಸಿ ಜೊತೆಗಿನ ಈ ಸಹಯೋಗವು ಕಂಪನಿಯು ತನ್ನ ಬ್ರ್ಯಾಂಡ್ ಗೋಚರತೆ ಹೆಚ್ಚಿಸಲು ಮತ್ತು ಪ್ರಪಂಚದಾದ್ಯಂತ ಇರುವ 100 ಕೋಟಿಗೂ ಹೆಚ್ಚಿನಕ್ರಿಕೆಟ್ ಉತ್ಸಾಹಿಗಳಲ್ಲಿ ಜಾಗೃತಿ ಹೆಚ್ಚಿಸಲು ನೆರವಾಗಲಿದೆ. ಈ ಪಾಲುದಾರಿಕೆಯ ಮೂಲಕ ಪಾಲಿಕ್ಯಾಬ್, ಈಗಾಗಲೇ ಇರುವ ಮತ್ತು ಭವಿಷ್ಯದ ಗ್ರಾಹಕರ ಜೊತೆಗಿನ ತನ್ನ ನಿಕಟ ಸಂಬಂಧವನ್ನು ಇನ್ನಷ್ಟು ಗಟ್ಟಿಗೊಳಿಸುವ ಗುರಿ ಹೊಂದಿದೆ. ಜೊತೆಗೆ, ‘ಉಜ್ವಲ ಜೀವನಕ್ಕೆ ನಾವು ಆವಿಷ್ಕಾರ ಮಾಡುತ್ತೇವೆ’ ಎಂಬ ಸಂದೇಶ ಪಸರಿಸಲು ಚಾಲನೆ ನೀಡಲಿದೆ. ‘ಐಸಿಸಿ’ನ ಜಾಗತಿಕ ಮಟ್ಟದ ಎಲ್ಲ ಪಂದ್ಯಾವಳಿಗಳ ಉದ್ದಕ್ಕೂ ಎಲ್ಲಾ ಬಗೆಯ ಸಂವಹನವು ಪಾಲಿಕ್ಯಾಬ್ ಇಂಡಿಯಾದ ನವೀನ, ಸುರಕ್ಷಿತ ಮತ್ತು ದಕ್ಷ ಇಂಧನ ಉತ್ಪನ್ನಗಳ ಮೇಲೆ ಗಮನ ಕೇಂದ್ರೀಕರಿಸಿರುತ್ತದೆ. ಗ್ರಾಹಕರ ಮತ್ತು ಪ್ರಭಾವಿಗಳ ಜಾಗೃತಿ ಮತ್ತು ಸಂಪರ್ಕ ನಿರ್ಮಾಣ ಮಾಡುತ್ತದೆ.

ಪಾಲಿಕ್ಯಾಬ್‌ನ ಅಧ್ಯಕ್ಷ ಮತ್ತು ಮುಖ್ಯ ಮಾರುಕಟ್ಟೆ ಅಧಿಕಾರಿ ನಿಲೇಶ್ ಮಲಾನಿ ಅವರು ಮಾತನಾಡಿ, ‘60ಕ್ಕೂ ಹೆಚ್ಚುದೇಶಗಳಲ್ಲಿ ಅಸ್ತಿತ್ವ ಹೊಂದಿರುವ ಸ್ವದೇಶಿ ಜನಪ್ರಿಯ ಬ್ರ್ಯಾಂಡ್ ಆಗಿರುವ ಪಾಲಿಕ್ಯಾಬ್‌ಗೆ ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ ಜೊತೆ ಪಾಲುದಾರಿಕೆ ಹೊಂದಿರುವುದು ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ವಿಶ್ವದಾದ್ಯಂತ ಇರುವ ಲಕ್ಷಾಂತರ ಅಭಿಮಾನಿಗಳ ಪಾಲಿಗೆ ಕ್ರಿಕೆಟ್ ಸ್ಫೂರ್ತಿದಾಯಕವಾಗಿದೆ. ಭಾವೋದ್ರೇಕದ ಈ ಸ್ಫೂರ್ತಿದಾಯಕ ಧ್ಯೇಯವೇ ಕ್ರಿಕೆಟ್ ಪಂದ್ಯಗಳನ್ನು ಮುನ್ನಡೆಸಿಕೊಂಡು ಹೋಗುತ್ತಿದೆ. ಪಾಲಿಕ್ಯಾಬ್‌ನಲ್ಲಿ ನಾವು ನಮ್ಮ ಗ್ರಾಹಕರ ಜೊತೆ ಅವರ ಸ್ಫೂರ್ತಿದಾಯಕ ಕ್ರಿಕೆಟ್ ಪಂದ್ಯಗಳ ಮೂಲಕ ಅವರನ್ನು ನೇರವಾಗಿ ಸಂಪರ್ಕಿಸುವುದರ ಮಹತ್ವವನ್ನು ನಾವು ಅರ್ಥಮಾಡಿಕೊಳ್ಳುತ್ತೇವೆ. ಕ್ರಿಕೆಟ್‌ಗೆ ಬೆಂಬಲ ನೀಡಲು ಐಸಿಸಿ ಜೊತೆಗೆ ಪಾಲುದಾರಿಕೆ ಹೊಂದುವುದಕ್ಕೆ ನಾವು ಸಂತೋಷಪಡುತ್ತೇವೆ. ನಾವು ಜೊತೆಯಾಗಿ ನಮ್ಮ ಪೋಷಕರಿಗೆ ಸ್ಮರಣೀಯ ಅನುಭವ ಒದಗಿಸಿ ಕೊಡಲಿದ್ದೇವೆ’ ಎಂದು ಹೇಳಿದ್ದಾರೆ.

ಐಸಿಸಿಮುಖ್ಯ ವಾಣಿಜ್ಯ ಅಧಿಕಾರಿ ಅನುರಾಗ್ ದಹಿಯಾ ಮಾತನಾಡಿ, ‘2023ರ ಅಂತ್ಯದವರೆಗೆ ಐಸಿಸಿನ ಜಾಗತಿಕ ಕ್ರಿಕೆಟ್ ಪಂದ್ಯಗಳಿಗೆ ಪಾಲಿಕ್ಯಾಬ್ ಅಧಿಕೃತ ಪಾಲುದಾರಿಕೆ ಹೊಂದಿರಲಿದೆ ಎಂಬುದನ್ನು ಖಚಿತಪಡಿಸಲು ನಮಗೆ ಖುಷಿಯಾಗುತ್ತಿದೆ. ನಮ್ಮ ಮುಂಬರುವ ಕ್ರಿಕೆಟ್ ಪಂದ್ಯಾವಳಿಗಳಲ್ಲಿ ಪಾಲಿಕ್ಯಾಬ್ ಜೊತೆ ಸಹಕರಿಸುವುದನ್ನು ನಾವು ಉತ್ಸಾಹದಿಂದ ಎದುರು ನೋಡುತ್ತಿದ್ದೇವೆ. ಹೆಚ್ಚೆಚ್ಚು ಅಭಿಮಾನಿಗಳು ನಮ್ಮ ಕ್ರೀಡೆಯನ್ನು ಆನಂದಿಸಬೇಕು ಎನ್ನುವ ನಮ್ಮ ಆಶಯ ಈ ಪಾಲುದಾರಿಕೆ ಮೂಲಕ ಸಾಕಾರಗೊಳ್ಳುತ್ತಿದೆ’ ಎಂದು ಹೇಳಿದ್ದಾರೆ.

# ಹೊಸಹಳ್ಳಿಯಲ್ಲಿ ಕಾರ್ಮಿಕರ ಸಂಘ ಅಸ್ತಿತ್ವಕ್ಕೆ



ಹುಳಿಯಾರು: ಹುಳಿಯಾರು ಹೋಬಳಿಯ ಹೊಸಹಳ್ಳಿ ಗ್ರಾಮದಲ್ಲಿ ಭಗತ್ ಸಿಂಗ್ ಕಟ್ಟಣ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘ ಶನಿವಾರ ಅಸ್ತಿತ್ವಕ್ಕೆ ಬಂದಿತು.

ಅಧ್ಯಕ್ಷರಾಗಿ ರಾಮು, ಪ್ರಧಾನ ಕಾರ್ಯದರ್ಶಿಯಾಗಿ ರೇವಯ್ಯ, ಉಪಾಧ್ಯಕ್ಷರಾಗಿ ಚಂದ್ರಕಲಾ, ಸಂಘಟನಾ ಕಾರ್ಯದರ್ಶಿಯಾಗಿ ನವೀನ್, ಖಜಾಂಜಿಯಾಗಿ ಪ್ರಕಾಶ್‌ಮೂರ್ತಿ ಆಯ್ಕೆಯಾಗಿದ್ದಾರೆ.

ನಿರ್ದೇಶಕರುಗಳಾಗಿ ಗೋಪಾಲಯ್ಯ, ನಿಂಗಪ್ಪ, ಎಚ್.ಎನ್.ರಂಗನಾಥ್, ಎಚ್.ಇ.ಚಂದ್ರು, ನಾಗೋಜಿರಾವ್, ಮಂಜುನಾಥ್, ವೆಂಕಟರಾಮಯ್ಯ, ಅಂಜಿನಪ್ಪ ಅವರು ಆಯ್ಕೆಯಾಗಿದ್ದಾರೆ.

ಜಿಲ್ಲಾ ಕಾರ್ಮಿಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೌಡರಂಗಪ್ಪ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ನಾಗಣ್ಣ, ತಾಲೂಕು ಸಂಘದ ಅಧ್ಯಕ್ಷ ಕೆ.ಕುಮಾರ್, ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಸೋಮಜ್ಜನಪಾಳ್ಯ ಘಟಕದ ಅಧ್ಯಕ್ಷ ಸಿದ್ಧರಾಮಯ್ಯ, ಕೆ.ಸಿ.ಪಾಳ್ಯ ಸಂಘದ ಶಿವಣ್ಣ, ಗ್ರಾಪಂ ಸದಸ್ಯ ಪುಟ್ಟಸ್ವಾಮಿ, ಗ್ರಾಪಂ ಸದಸ್ಯೆ ಕಲ್ಪನಾ, ಗುಡಿಗೌಡರಾದ ಬಸವರಾಜು, ನೂತನ ಘಟಕವನ್ನು ಉದ್ಘಾಟಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089